# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 | ಸಂಚಿಕೆ – 189 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 12–02–2024 ಸೋಮವಾರ | ಪುಟ: 4 | ಬೆಲೆ : ರೂ.2–00
Volume - 01 | Issue - 189 | Title- Code: KARKAN 28269 | Chitradurga | Date: 12-02-2024 Monday | Page: 4 | Price: Rs. 2-00



ಒಳಪುಟದ ಸುದ್ದಿಗಳು
5 ವರ್ಷವೂ ಗ್ಯಾರಂಟಿ ಮುಂದುವರಿಕೆ: ಸುಧಾಕರ್ 2
ಚಿತ್ರದುರ್ಗ ಜನತೆ ನೀಡಿದ ಬೀಳ್ಕೊಡುಗೆ ಜೀವನದಲ್ಲಿ ಮರೆಯಲಾಗದ ಮಧುರ ಕ್ಷಣ 3
ಕೈಗಾರಿಕೆಗಳ ಮಂಡಳಿ ನೂತನ ಅಧ್ಯಕ್ಷರಾಗಿ ಟಿ.ರಘುಮೂರ್ತಿ ಪದಗ್ರಹಣ 4



ಸುದ್ದಿ, ಜಾಹಿರಾತಿಗೆ 9686622252


## ಶುಭ ನುಡಿ

ರೂಪಾಯಿಯಿಲ್ಲದೆ ಮನುಷ್ಯ ಬಡವನಲ್ಲ. ಆದರೆ ಕನಸು ಮತ್ತು ಮಹತ್ವಾಕಾಂಕ್ಷೆ ಇಲ್ಲದೆ ಮನುಷ್ಯ ನಿಜವಾಗಿಯೂ ಬಡವನಾಗಿದ್ದಾನೆ... ನಾವು ಸರಿಯಾಗಿದ್ದರೂ, ಯಾರು ನಮ್ಮನ್ನು ಅರ್ಥಮಾಡಿಕೊಳ್ಳದಿದ್ದರೆ ಸುಮ್ಮನಿರುವುದು ಲೇಸು. ಏಕೆಂದರೆ ವಾದ ಮಾತು ಕೆಡಿಸುತ್ತದೆ, ಮಾತು ಸಂಬಂಧ ಕೆಡಿಸುತ್ತದೆ.

## ಫಾಸ್ಟ್ ನ್ಯೂಸ್

### ಭರಮಸಾಗರ ಆಸ್ಪತ್ರೆಯಲ್ಲಿ ಪ್ರೀ ವೆಡ್ಡಿಂಗ್ ಚಿತ್ರೀಕರಣ: ಹೊರಗುತ್ತಿಗೆ ವೈದ್ಯ ವಜಾ

» ಚಿತ್ರದುರ್ಗ

ಭರಮಸಾಗರದ ಸಮುದಾಯ ಆರೋಗ್ಯ ಕೇಂದ್ರದಲ್ಲಿನ ಶಸ್ತ್ರಚಿಕಿತ್ಸಾ ಕೊಠಡಿಯಲ್ಲಿ ಪ್ರೀ ವೆಡ್ಡಿಂಗ್ ಶೂಟ್ ಚಿತ್ರೀಕರಣ ಮಾಡಿಕೊಂಡಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ ಇಲ್ಲಿನ ಹೊರಗುತ್ತಿಗೆ ವೈದ್ಯ ಡಾ. ಅಬಿಷೇಕ್ ಅವರನ್ನು ಕರ್ತವ್ಯದಿಂದ ವಜಾಗೊಳಿಸಿ ಜಿಲ್ಲಾಧಿಕಾರಿ ವೆಂಕಟೇಶ್ ಟಿ. ಅವರು ಆದೇಶಿಸಿದ್ದಾರೆ.ರಾಷ್ಟ್ರೀಯ ಆರೋಗ್ಯ ಅಭಿಯಾನದಡಿ ಗುತ್ತಿಗೆ ಆಧಾರದಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ವೈದ್ಯ ಡಾ. ಅಬಿಷೇಕ್ ಅವರು ಭರಮಸಾಗರದ ಸಮುದಾಯ ಆರೋಗ್ಯ ಕೇಂದ್ರದಲ್ಲಿನ ಶಸ್ತ್ರಚಿಕಿತ್ಸಾ ಕೊಠಡಿಯಲ್ಲಿ ಕಳೆದ ಫೆ 07 ರಂದು ಪ್ರೀ ವೆಡ್ಡಿಂಗ್ ಶೂಟ್ ಮಾಡಿರುತ್ತಾರೆ ಎಂದು ಸಾಮಾಜಿಕ ಜಾಲತಾಣಗಳಲ್ಲಿ ಹಾಗೂ ಸುದ್ದಿ ಮಾಧ್ಯಮಗಳಲ್ಲಿ ಬಿತ್ತರವಾಗಿತ್ತು. ಇಂತಹ ಕಾರ್ಯವು ನಿಯಮ ಬಾಹಿರವಾಗಿದ್ದು, ವೈದ್ಯರು ಕರ್ತವ್ಯ ಲೋಪವೆಸಗಿರುತ್ತಾರೆ. ಹೀಗಾಗಿ ಭರಮಸಾಗರ ಸಮುದಾಯ ಆರೋಗ್ಯ ಕೇಂದ್ರದ ಆಡಳಿತ ವೈದ್ಯಾಧಿಕಾರಿಗಳ ವರದಿಯನ್ವಯ ಡಾ. ಅಭಿಷೇಕ್ ಅವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಕರ್ತವ್ಯದಿಂದ ವಜಾಗೊಳಿಸಲಾಗಿದೆ ಎಂದು ಜಿಲ್ಲಾಧಿಕಾರಿ ವೆಂಕಟೇಶ್ ಟಿ. ಅವರು ತಿಳಿಸಿದ್ದಾರೆ.

### ಜಿಲ್ಲೆಯಲ್ಲಿ 4 ಹೈಟೆಕ್ ಹಾರ್ವೆಸ್ಟರ್ ಹಬ್ ಸ್ಥಾಪನೆ ಗುರಿ: ಸಹಾಯಧನಕ್ಕೆ ಅರ್ಜಿ ಆಹ್ವಾನ

» ಚಿತ್ರದುರ್ಗ

ಕೃಷಿ ಯಂತ್ರಧಾರೆ ಕೇಂದ್ರಗಳನ್ನು ಬಲಪಡಿಸಿ ಹೈಟೆಕ್ ಹಾರ್ವೆಸ್ಟರ್ ಹಬ್‌ಗಳನ್ನು ಸ್ಥಾಪಿಸಲು ಉದ್ದೇಶಿಸಲಾಗಿದೆ. ಕೃಷಿಯಂತ್ರಧಾರೆ ಕೇಂದ್ರಗಳೊಂದಿಗೆ ಇತರೆ ಸಂಘ–ಸಂಸ್ಥೆಗಳು ಹಾಗೂವೈಯಕ್ತಿಕಫಲಾನುಭವಿಗಳಿಗೂಸಹಹೈಟೆಕ್ ಹಾರ್ವೆಸ್ಟರ್ ಹಬ್ ಸ್ಥಾಪಿಸಲು ಅವಕಾಶವಿದೆ. ಪ್ರತಿ ಘಟಕ ಸ್ಥಾಪನೆಗೂ ಶೇ.40 ರಿಂದ ಶೇ.70 ರಷ್ಟು ಸಹಾಯಧನ ನೀಡಲಾಗುವುದು. ಜಿಲ್ಲೆಗೆ 4 ಗುರಿ ನಿಗದಿ ಮಾಡಲಾಗಿದ್ದು, ಕಂಬೈನ್ಡ್ ಹಾರ್ವೆಸ್ಟರ್ ಹಬ್ ಸ್ಥಾಪನೆಗೆ ಒಂದು ಸಂಘ ಸಂಸ್ಥೆ, ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ತಲಾ ಓರ್ವ ವೈಯಕ್ತಿಕ ಫಲಾನುಭವಿ ತಲಾ ಗರಿಷ್ಠ ರೂ.50 ಲಕ್ಷ ಹಾಗೂ ಓರ್ವ ಸಾಮಾನ್ಯ ವರ್ಗದ ವೈಯಕ್ತಿಕ ಫಲಾನುಭವಿ ಗರಿಷ್ಟ ರೂ. 40 ಲಕ್ಷ ಸಹಾಯಧನ ಪಡೆಯಬಹುದು. ಆಸಕ್ತರು ದಿನಾಂಕ 17–02–2024 ರೊಳಗೆ ಅರ್ಜಿ ಸಲ್ಲಿಸಬಹುದಾಗಿದೆ. ದೊರಕುವ ಸಹಾಯಧನ ಗರಿಷ್ಠ ಮೊತ್ತದ ವಿವರಗಳಿಗಾಗಿ ಸಹಾಯಕ ಕೃಷಿ ನಿರ್ದೇಶಕ, ಉಪನಿರ್ದೇಶಕ ಹಾಗೂ ಜಂಟಿ ಕೃಷಿ ನಿರ್ದೇಶಕರ ಕಛೇರಿಯನ್ನು ಸಂಪರ್ಕಿಸಿ.

### ತೋಡ್ಲಾರಹಟ್ಟಿ: ಹಗಲಲ್ಲೇ ಜೂಜಾಟ; ನಾಲ್ವರ ವಶ.

» ಚಳ್ಳಕೆರೆ

ತಾಲ್ಲೂಕಿನ ನನ್ನಿವಾಳ ಗ್ರಾಮ ಪಂಚಾಯಿತಿ ವ್ಯಾಪ್ತಿಯ ತೋಡ್ಲಾರಹಟ್ಟಿ ಗ್ರಾಮದ ಚೌಡಮ್ಮ ದೇವಸ್ಥಾನದ ಬಳಿ ಹಾಡುಹಗಲೇ ಜೂಜಾಟವಾಡುತ್ತಿದ್ದ ಚಿತ್ರಯ್ಯನಹಟ್ಟಿಯ ಎಂ.ಪಾಪಣ್ಣ ಇತರೆ ಮೂವರನ್ನು ವಶಕ್ಕೆ ಪಡೆದ ಪೊಲೀಸರು ಅವರಿಂದ ಜೂಜಾಟದ ಹಣ 2150ರೂ ವಶಪಡಿಸಿಕೊಂಡಿದ್ದಾರೆ.

ಖಚಿತ ವರ್ತಮಾನದ ಮೇರೆಗೆ ಹಿರಿಯ ಅಧಿಕಾರಿಗಳ ಮಾರ್ಗದರ್ಶನದಲ್ಲಿ ಪೊಲೀಸ್ ಪೇದೆ ವಿಶಾಲ್ ಮತ್ತು ಸಿಬ್ಬಂದಿ ವರ್ಗ ದಾಳಿ ನಡೆಸಿ ನಾಲ್ವರನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿದ್ದಾರೆ. ಎಎಸ್‌ಐ ಶಿವಣ್ಣ ಪ್ರಕರಣ ದಾಖಲಿಸಿ ತನಿಖೆ ನಡೆಸುತ್ತಿದ್ದಾರೆ.

# ನಮ್ಮದು ಸಾಮಾಜಿಕ ಬದ್ಧತೆಯುಳ್ಳ ಸರ್ಕಾರ



» ಬೆಂಗಳೂರು

ಮುಖ್ಯ ಮಂತ್ರಿ ಸಿದ್ದರಾಮಯ್ಯ ಅವರು ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ದಲಿತ ಸಂಘಟನೆಗಳ ಮುಖಂಡರೊಂದಿಗೆ 2024– 25 ನೇ ಸಾಲಿನ ಆಯವ್ಯಯ ಪೂರ್ವಭಾವಿ ಚರ್ಚೆ ನಡೆಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಮುಖ್ಯಮಂತ್ರಿಗಳು, ಕರ್ನಾಟಕದಲ್ಲಿ ಎಸ್.ಸಿ.ಎಸ್.ಪಿ/ ಟಿ. ಎಸ್.ಪಿ ಕಾಯ್ದೆಯನ್ನು ಜಾರಿಗೆ ತರಲಾಗಿದೆ. 2008 ರಿಂದ 2013 ರವರೆಗೆ 22,000 ಕೋಟಿರೂ.ಗಳು ವೆಚ್ಚವಾಗಿದೆ 2013 ರಿಂದ 2018 ರವರೆ 88 ಸಾವಿರ ಕೋಟಿ ರೂ.ಗಳು ವೆಚ್ಚವಾಗಿದೆ .

ಹೆಚ್ಚು ದುರುಪಯೋಗವಾಗುತ್ತದೆ ಎಂಬ ಕಾರಣದಿಂದ 7 ಡಿ ಯನ್ನು ತೆಗೆದುಹಾಕಿ ಆದೇಶವನ್ನು ಹೊರಡಿಸಿದೆ. ಯಾವುದೇ ಆರ್ಥಿಕ ವರ್ಷದಲ್ಲಿ ಹಣ ಖರ್ಚಾಗದಿದ್ದರೆ ಮುಂದಿನ ವರ್ಷಕ್ಕೆ ಮುಂದುವರೆಯುತ್ತದೆ. ಅಧಿಕಾರಿಗಳ ನಿರ್ಲಕ್ಷ್ಯ ದಿಂದ ದುರುಪಯೋಗವಾದರೆ ಕ್ರಿಮಿನಲ್ ಮೊಕದ್ದಮೆ ಹೂಡಬಹುದು. ಜನಸಂಖ್ಯೆಗೆ ಅನುಗುಣವಾಗಿ ಹಣವನ್ನು ಖರ್ಚು ಮಾಡಬೇಕು ಎಂದು ಆಂಧ್ರಪ್ರದೇಶ ಹಾಗೂ ಕರ್ನಾಟಕದಲ್ಲಿ ಕಾಯ್ದೆ ತರಲಾಗಿದೆ. ಇದು ಇಡೀ ದೇಶದಲ್ಲಿ ಆಗಬೇಕು. ಕಾಂಗ್ರೆಸ್ ಪಕ್ಷದ ಪ್ರಣಾಳಿಕೆ ಯಲ್ಲಿ ಪ್ರಮುಖ ಯೋಜನೆಯಾಗಬೇಕೆಂದು ಸೂಚಿಸಿದೆ ಎಂದರು.

ಬಡ್ತಿಯಲ್ಲಿ ಮೀಸಲಾತಿ ಕಾಯ್ದೆ ಮಾಡಿದ್ದು ಇಡೀ ದೇಶದಲ್ಲಿ ಕರ್ನಾಟಕ ಮಾತ್ರ. ಪಿ.ಟಿ. ಸಿ.ಎಲ್ ಕಾಯ್ದೆ ತಿದ್ದುಪಡಿ ಮಾಡಿದೆ. ಎಸ್.ಸಿ.ಎಸ್.ಟಿ ಜನಾಂಗದವರಿಗೆ ಗುತ್ತಿಗೆಯಲ್ಲಿ 1 ಕೋಟಿ ವರೆಗೆ ಮೀಸಲಾತಿ ನೀಡಲಾಗಿದೆ. ಆರ್ಥಿಕವಾಗಿ, ಸಾಮಾಜಿಕವಾಗಿ ಶಕ್ತಿ ತುಂಬಲು ಈ ಕ್ರಮಗಳನ್ನು ಕೈಗೊಂಡಿದೆ ಎಂದರು.7 % ಪರಿಶಿಷ್ಟ ವರ್ಗದವರಿದ್ದಾರೆ, 17.15% ಪರಿಶಿಷ್ಟ ಜಾತಿಯವರಿದ್ದಾರೆ. 21.1 % ಜನಸಂಖ್ಯೆಗೆ ಅನುಗುಣವಾಗಿ ಅಭಿವೃದ್ಧಿ ಕೆಲಸದಲ್ಲಿ ಅನುದಾನ ನೀಡಿದೆ.

ಬಿಜೆಪಿ ಸರ್ಕಾರದಲ್ಲಿ ಬಜೆಟ್ ಗಾತ್ರ ಹೆಚ್ಚಾದರೂ ಎಸ್.ಸಿ, ಎಸ್ ಪಿ / ಟಿಎಸ್ ಪಿ ಅನುದಾನ ಹೆಚ್ಚಾಗಿರಲಿಲ್ಲ. ಇದನ್ನು ಗುರುತಿಸಬೇಕು. ನಮ್ಮ ಸರ್ಕಾರ ಸಾಮಾಜಿಕ ಬದ್ಧತೆಯುಳ್ಳ ಸರ್ಕಾರ ಎಂದರು.

ಸಭೆಯಲ್ಲಿಹಿಂದುಳಿದವರ್ಗಗಳಕಲ್ಯಾಣ ಸಚಿವ ನಾಗೇಂದ್ರ, ಮುಖ್ಯ ಮಂತ್ರಿಗಳ ರಾಜಕೀಯ ಕಾರ್ಯದರ್ಶಿಗಳಾದ ಗೋವಿಂದರಾಜು, ನಸೀರ್ ಅಹ್ಮದ್, ಮುಖ್ಯ ಮಂತ್ರಿಗಳ ಅಪರ ಮುಖ್ಯ ಕಾರ್ಯದರ್ಶಿ ಎಲ್.ಕೆ.ಅತೀಕ್, ರಾಜ್ಯ ಯೋಜನಾ ಆಯೋಗದ ಉಪಾಧ್ಯಕ್ಷ ರಾಜೀವ್ ಗೌಡ ಹಾಗೂ ಅಧಿಕಾರಿಗಳು ಉಪಸ್ಥಿತರಿದ್ದರು.

## ಅಮಿತ್ ಶಾ ಕರ್ನಾಟಕಕ್ಕೆ ಬರಿಗೈಯಲ್ಲಿ ಬಂದಿದ್ದಾರೆ

### ಬಡವರು, ರೈತರ ಬಗ್ಗೆ ಮಾತನಾಡಲು ಅಮಿತ್ ಶಾ ಅವರಿಗೆ ನೈತಿಕತೆ ಇಲ್ಲ: ಮುಖ್ಯಮಂತ್ರಿ ಸಿದ್ದರಾಮಯ್ಯ

» ಬೆಂಗಳೂರು

ಕೇಂದ್ರ ಸಗೃಹ ಸಚಿವ ಅಮಿತ್ ಶಾ ಅವರು ಕರ್ನಾಟಕಕ್ಕೆ ಬರಿಗೈಯಲ್ಲಿ ಬಂದಿದ್ದಾರೆ. ಬಡವರು, ರೈತರ ಬಗ್ಗೆ ಮಾತನಾಡಲು ಅವರಿಗೆ ನೈತಿಕತೆ ಇಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಅವರು ಇಂದು ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ರೈತ ಸಂಘಟನೆ ಹಾಗೂ ಮುಖಂಡರುಗಳ ಸಭೆ ನಡೆಸಿದ ನಂತರ ಮಾಧ್ಯಮದವರೊಂದಿಗೆ ಮಾತನಾಡಿದರು.

**ನೈತಿಕಹಕ್ಕಿಲ್ಲ:** ಇಂದಿನವರೆಗೆ ಬರಗಾಲದ ಬಗ್ಗೆ ಐದು ತಿಂಗಳಾದರೂ ಒಂದು ಸಭೆಯನ್ನೂ ಅಮಿತ್ ಶಾ ಕರೆದಿಲ್ಲ. ಬರಪರಿಹಾರ ಕೊಡಲು ಇರುವ ಸಮಿತಿಗೆ ಅವರೇ ಅಧ್ಯಕ್ಷರು. ದೇಶದ ಬಗ್ಗೆ ಮಾತನಾಡಲು ಅವರಿಗೆ ಯಾವ ನೈತಿಕತೆ ಇದೆ. ರೈತರು ಬರಗಾಲದಲ್ಲಿ ಕಷ್ಟಪಡುತ್ತಿದ್ದಾರೆ. ಬರಗಾಲ ಬಂದಾಗ ಎಂ.ಎನ್. ನರೇಗಾ ಯೋಜನೆಯಡಿ 150 ಮಾನವದಿನಗಳನ್ನು ಹೆಚ್ಚಿಸುವುದು ಕಡ್ಡಾಯವಾದರೂ ಇಂದಿನವರೆಗೆ ಹೆಚ್ಚಿಸಿಲ್ಲ. ಆದರೆ ಕೇಂದ್ರ ಸರ್ಕಾರದವರು ಅನುಮತಿ ನೀಡದೇ, 2–3 ಪತ್ರ ಬರೆದಿದ್ದರೂ ಉತ್ತರ ನೀಡಿಲ್ಲ ಎಂದರು.

**ಅನ್ಯಾಯವನ್ನೆಲ್ಲಾ ಸರಿ ಎಂದು ಹೇಳಬಾರದು:** ನಿರ್ಮಲಾ ಸೀತಾರಾಮನ್ ಅವರು ತಕ್ಕ ಉತ್ತರ ನೀಡಿದ್ದಾರೆ ಎಂದು ಮಾಜಿ ಪ್ರಧಾನಿ ದೇವೇಗೌಡರು ಸಂಸತ್ತಿನಲ್ಲಿ ಹೇಳಿಕೆ ನೀಡಿರುವ ಬಗ್ಗೆ ಪ್ರತಿಕ್ರಿಯೆ ನೀಡಿ ಈಗ ಅವರು ಅವರ ಜೊತೆ ಸೇರಿದ್ದಾರೆ. ಇದೇ ದೇವೆಗೌಡರು ಮುಂದಿನ ಜನ್ಮದಲ್ಲಿ ಮುಸ್ಲಿಂ ಆಗಿ ಹುಟ್ಟಬೇಕು ಎಂದಿದ್ದ ದೇವೇಗೌಡರು ಈಗೇನು ಹೆಳುತ್ತಿದ್ದಾರೆ. ಅವರು ಯಜಮಾನರು, ಮಾಜಿ ಪ್ರಧಾನಿಗಳಾಗಿದ್ದವರು ಹೀಗೆ ಹೇಳಬಾರದು. ಬಿಜೆಪಿಯೊಂದಿಗೆ ಮೈತ್ರಿ ಮಾಡಿಕೊಂಡಿದ್ದಾರೆ ಎಂಬ ಕಾರಣಕ್ಕೆ ಅವರು ಮಾಡಿದ ಅನ್ಯಾಯವನ್ನೆಲ್ಲಾ ಸರಿ ಎಂದು ಹೇಳಬಾರದು ಎಂದರು.

**ಚಾಮರಾಜನಗರ, ಮೈಸೂರು ಕ್ಷೇತ್ರ ಎರಡನ್ನೂ ಗೆಲ್ಲಲಿದೆ:** ಚುನಾವಣೆ ರಣಕಹಳೆ ಮೈಸೂರಿನಿಂದಲೇ ಅಮಿತ್ ಶಾ ಮೊಳಗಿಸುತ್ತಿರುವ ಬಗ್ಗೆ ಮಾತನಾಡಿ ಚಾಮರಾಜನಗರ, ಮೈಸೂರು ಕ್ಷೇತ್ರ ಎರಡನ್ನೂ ಕಾಂಗ್ರೆಸ್ ಗೆಲ್ಲಲಿದೆ ಎಂದು ಹೇಳಿದರು.

## ರಾಜ್ಯ ಪ್ರತ್ಯೇಕ ಬ್ಯಾಂಕ್ ಖಾತೆ ತೆರೆದರೆ ಭದ್ರಾ ಹಣ ಜಮೆ: ಸಚಿವ ನಾರಾಯಣಸ್ವಾಮಿ ಹೇಳಿಕೆ

» ಚಿತ್ರದುರ್ಗ

ಕೇಂದ್ರ ಸರ್ಕಾರ ಅಪ್ಪರ್ ಭದ್ರಾ ಯೋಜನೆಗೆ ಹಣವನ್ನು ನೀಡಲು ತಯಾರಿದೆ. ಆದರೆ, ರಾಜ್ಯ ಸರ್ಕಾರದಿಂದ ಇದಕ್ಕಾಗಿ ಪ್ರತ್ಯೇಕವಾಗಿ ಬ್ಯಾಂಕ್ ಖಾತೆ ತೆರೆಯಬೇಕಿದೆ. ಆದರೆ ಈ ಕೆಲಸವನ್ನು ರಾಜ್ಯ ಸರ್ಕಾರ ಮಾಡುತ್ತಿಲ್ಲ ಇದರಿಂದ ಕೇಂದ್ರ ಸರ್ಕಾರ ಹಣವನ್ನು ನೀಡುತ್ತಿಲ್ಲ ಎಂದು ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ರಾಜ್ಯ ಸಚಿವ ಎ.ನಾರಾಯಣಸ್ವಾಮಿ ಕಾಂಗ್ರೆಸ್‌ಗೆ ತಿರುಗೇಟು ನೀಡಿದರು.

ಚಿತ್ರದುರ್ಗದಿಂದ ಆಯೋಧ್ಯಗೆ ಹೋಗುತ್ತಿರುವ ಭಕ್ತಾಧಿಗಳಿಗೆ ರೈಲ್ವೆ ನಿಲ್ದಾಣದಲ್ಲಿ ಹಮ್ಮಿಕೊಂಡಿದ್ದ ಬೀಳ್ಕೊಡುಗೆ ಸಮಾರಂಭದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೇಂದ್ರ ಸರ್ಕಾರ ನೀಡುವ ಹಣವನ್ನು ಆದಕ್ಕೆ ಮಾತ್ರ ಉಪಯೋಗ ಮಾಡಬೇಕಿದೆ. ಅದನ್ನು ಬಿಟ್ಟು ಬೇರೆ ಕೆಲಸಕ್ಕೆ ಉಪಯೋಗ ಮಾಡಬಾರದು. ಇದು ಕೇಂದ್ರದ ನಿಯಮವಾಗಿದೆ ಆದರೆ ಕೆಲವರು ಉದ್ದೇಶ ಬಿಟ್ಟು ಬೇರೆ ಕಾರ್ಯಕ್ಕೆ ಬಳಕೆ ಮಾಡುತ್ತಾರೆ. ಈ ಹಿನ್ನಲೆಯಲ್ಲಿ ಬ್ಯಾಂಕ್‌ನಲ್ಲಿ ಪ್ರತ್ಯೇಕ ಅಕೌಂಟ್ ಮಾಡುವುದರ ಮೂಲಕ ಹಣವನ್ನು ವ್ಯಯ ಮಾಡಬೇಕಿದೆ ಎಂದರು.



ಪುಟ 3

## ದೇವರ ಎತ್ತುಗಳಿಗೆ ಮೇವು ನೀಡಿದ ವಾಲ್ಮೀಕಿ ನಾಯಕ ಮಹಾಸಭಾ

» ಚಳ್ಳಕೆರೆ

ನಮ್ಮ ಬುಡಕಟ್ಟು ಸಂಪ್ರದಾಯದ ಆರಾಧ್ಯ ದೈವವಾದ ದೇವರ ಎತ್ತುಗಳ ರಕ್ಷಣೆಗೆ ನಾವು ಸದಾ ಸಿದ್ದರಿದ್ದೇವೆ. ನಾವು ಜೊತೆಗೂಡಿ ದಾನಿಗಳ ಸಹಾಯದಿಂದ ದೇವರ ಎತ್ತುಗಳಿಗೆ ಮೇವು, ನೀರಿನ ಶಾಶ್ವತ ವ್ಯವಸ್ಥೆ ಮಾಡುವ ಆಲೋಚನೆ ಇದೆ ಎಂದು ಕರ್ನಾಟಕ ವಾಲ್ಮೀಕಿ ನಾಯಕ ಮಹಾಸಭಾದ ರಾಜ್ಯಾಧ್ಯಕ್ಷ ಸಿರಿಗೆರೆ ತಿಪ್ಪೇಶ್ ತಿಳಿಸಿದರು.

ಅವರು, ತಾಲ್ಲೂಕಿನ ಬೊಮ್ಮದೇವರಹಟ್ಟಿಯಲ್ಲಿನ ದೇವರ ಎತ್ತುಗಳಿಗೆ ಸಂಘಟನೆ ವತಿಯಿಂದ ನೀಡಲಾದ ಬೂಸ, ಇಂಡಿ, ಮೇವು ವಿತರಿಸಿ ಮಾತನಾಡಿದರು. ಸರ್ಕಾರ ಮಠಮಾನ್ಯಗಳಿಗೆ ನೀಡುವ ಕೋಟಿ, ಕೋಟಿ ಹಣ ನೀಡುವ ಬದಲು, ದೇವರ ಎತ್ತುಗಳ ರಕ್ಷಣೆಗೆ ನೀಡಬೇಕಿದೆ. ಚಳ್ಳಕೆರೆ ಮತ್ತು ಮೊಳಕಾಲ್ಮೂರು ತಾಲ್ಲೂಕಿನ ಸುಮಾರು 1800ಕ್ಕೂ ಹೆಚ್ಚು ದೇವರ ರಾಸುಗಳಿವೆ. ಅವುಗಳ ರಕ್ಷಣೆ ನಮ್ಮೆಲ್ಲರ ಹೊಣೆಯಾಗಿದೆ.

ಪುಟ 2


## ಪ್ರಮುಖ ಸುದ್ದಿ

# ರಾಮನ ದರ್ಶನಕ್ಕೆ ದುರ್ಗದಿಂದ 415 ಮಂದಿ ಪ್ರಯಾಣ

» ಚಿತ್ರದುರ್ಗ

ದೇಶದಲ್ಲಿ ಸಂವಿಧಾನ ಎಷ್ಟು ಮುಖ್ಯವೂ ಅಷ್ಟೇ ಪ್ರಮಾಣದಲ್ಲಿ ರಾಮಾಯಣ ಮತ್ತು ಮಹಾಭಾರತ ನಮ್ಮ ಬಹು ಸಂಖ್ಯಾತ ಹಿಂದುಗಳಿಗೆ ಅವಶ್ಯ ಜೀವನ ಪದ್ದತಿಯಾಗಿದೆ ಎಂದು ಕೇಂದ್ರದ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ರಾಜ್ಯ ಸಚಿವರಾದ ಎ.ನಾರಾಯಣಸ್ವಾಮಿ ತಿಳಿಸಿದರು.

ಚಿತ್ರದುರ್ಗ ನಗರದಿಂದ ಆಯೋಧ್ಯಗೆ ಹೋಗುವ ರಾಮ ಭಕ್ತಾಧಿಗಳಿಗೆ ರೈಲ್ವೆ ನಿಲ್ದಾಣದಲ್ಲಿ ಹಮ್ಮಿಕೊಂಡಿದ್ದ ಬಿಳ್ಕೋಡುಗೆ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದ ಸಚಿವರು, ಕೇಂದ್ರ ಸರ್ಕಾರ ನರೇಂದ್ರ ಮೋದಿಯವರ ಆಪೇಕ್ಷೆಯಂತೆ ಆಯೋಧ್ಯಯ ರಾಮ ಮಂದಿರದಲ್ಲಿ ರಾಮನ ದರ್ಶನ ಭಾಗ್ಯವನ್ನು ಕರುಣಿಸಿದ್ದಾರೆ. ಕರ್ನಾಟಕದಿಂದ 35 ಸಾವಿರ ಮಂದಿಯನ್ನು ರಾಮನ ದರ್ಶನಕ್ಕೆ ಕಳುಹಿಸಲಾಗುತ್ತಿದೆ. ದೇಶದ ಅನೇಕ ಕ್ಯಾಬಿನೆಟ್ ಸಚಿವರುಗಳಿಗೆ ರಾಮನ ದರ್ಶನ ಸಿಕ್ಕಿಲ್ಲ ಆದರೆ ಅತನ ಭಕ್ತರಾದ ನಿಮಗೆ ರಾಮನ ದರ್ಶನ ಮಾಡುವ ಭಾಗ್ಯ ಬಂದಿದೆ. ಚಿತ್ರದುರ್ಗದಿಂದ ಹೊಗುತ್ತಿರುವ 415 ರಾಮ ಭಕ್ತಾಧಿಗಳಿಗೆ ರಾಮನ ದರ್ಶನವಾಗುತ್ತದೆ. ರಾಮಮಂದಿರ ನಿರ್ಮಾಣಕ್ಕಾಗಿ ಅನೇಕರು ಹೋರಾಟವನ್ನು ಮಾಡಿದ್ದಾರೆ. ದೇಶದಲ್ಲಿ ಹಲವಾರು ಜನತೆ ತಮ್ಮ ಪ್ರಾಣವನ್ನು ನೀಡಿದ್ದಾರೆ. ರಾಮಂದಿರ ಕಾಶಿ ಮತ್ತು ಮಧುರ ಈ ದೇಶದ ಬಹಸಂಖ್ಯಾತರ ಅಸ್ಮಿತೆ, ಕೋಟ್ಯಾಂತರ ಜನತೆ ಕನಸು ರಾಮ ರಾಜ್ಯವನ್ನು ನಿರ್ಮಾಣ ಮಾಡಬೇಕು, ರಾಮ ರಾಜ್ಯದ ಕನಸು ನನಸಾಗಬೇಕಾದರೆ ರಾಮಮಂದಿರ ನಿರ್ಮಾಣವಾಗಬೇಕು ಎಂಬುದು ಮೋದಿಯವರ ಕನಸಾಗಿತ್ತು ಎಂದರು.



ವಿಶ್ವ ಭಾರತದ ಸಾದನೆಯನ್ನು ಕೊಡಾಡಿದೆ. ದೇಶದಲ್ಲಿ ಸಂವಿಧಾನ ಎಷ್ಟು ಮುಖ್ಯವೂ ಅಷ್ಟೇ ಪ್ರಮಾಣದಲ್ಲಿ ರಾಮಾಯಣ ಮತ್ತು ಮಹಾಭಾರತ ನಮ್ಮ ಬಹು ಸಂಖ್ಯಾತ ಹಿಂದುಗಳಿಗೆ ಅವಶ್ಯ ಜೀವನ ಪದ್ದತಿಯಾಗಿದೆ. ಹಿಂದು ನೆಲೆಗಟ್ಟಿನ ಭಾರತಕ್ಕೆ ಬಹು ಸಂಖ್ಯಾತರಿಗೆ ಇತರೆ ಧರ್ಮದವರು ಸಹಕಾರವನ್ನು ನೀಡಬೇಕಿದೆ. 500 ವರ್ಷಗಳ ಹೋರಾಟಕ್ಕೆ ದಾಸ್ಯದಿಂದ ಮುಕ್ತವಾಗಿದ್ದೇವೆ. ಈ ಕಾರ್ಯವನ್ನು ಮಾಡಿದ ಕೇಂದ್ರ ಸರ್ಕಾರಕ್ಕೆ ಅಭಿನಂದನೆ, ದೇಶದಲ್ಲಿ ರಾಮನ ದರ್ಶನಕ್ಕೆ ರೈಲ್ವೆ ಇಲಾಖೆಯವರು, ರಾಷ್ಟ್ರದ ಮೂಲೆ. ಮೂಲೆಗಳಿಂದ ಆಯೋಧ್ಯಗೆ ಹೋಗಲು ರಾಮನ ದರ್ಶನಕ್ಕೆ ಅವಕಾಶವನ್ನು ಮಾಡಿದ್ದಾರೆ ತುಂಬು ಹೃದಯದ ಅಭಿನಂದನೆಗಳು ಎಂದು ನಾರಾಯಣಸ್ವಾಮಿ ತಿಳಿಸಿದರು.

ವಿಧಾನ ಪರಿಷತ್ ಸದಸ್ಯರಾದ ಕೆ.ಎಸ್. ನವೀನ್ ಮಾತನಾಡಿ, ರಾಮನ ದರ್ಶನ ಪಡೆಯುವುದಕ್ಕೆ ಎಲ್ಲರಿಗೂ ಸಹಾ ಸಂತಸವಾಗಿದೆ. ಜಿಲ್ಲೆಯಿಂದ ಹೋಗುತ್ತಿರುವ ಭಕ್ತಾಧಿಗಳಿಗೆ ಒಳ್ಳೇಯ ದರ್ಶನವಾಗಲಿ, ರಾಮನ ದರ್ಶನದಿಂದ ಬಂದ ಮೇಲೆ ಕನಿಷ್ಠ 500 ಮನೆಗಾದರೂ ಶ್ರೀರಾಮನ ಪ್ರಸಾದವನ್ನು ತಲುಪಿಸುವ ಕಾರ್ಯವನ್ನು ಮಾಡಿ ಶ್ರೀರಾಮ ಆದರ್ಶ ಮತ್ತು ತತ್ವಗಳನ್ನು ಸಾಧ್ಯವಾದಷ್ಟು ನಿಮ್ಮ ಜೀವನದಲ್ಲಿ ಅಳವಡಿಕೆಯನ್ನು ಮಾಡಿಕೊಳ್ಳುವಂತೆ ಕರೆ ನೀಡಿದರು.

ಮಾಜಿ ಶಾಸಕರಾದ ಜಿ.ಎಚ್.ತಿಪ್ಪಾರೆಡ್ಡಿ ಮಾತನಾಡಿ, ಆಯೋಧ್ಯಯಲ್ಲಿ ಶ್ರೀರಾಮ ಮಂದಿರ ನಿರ್ಮಾಣವಾಗಬೇಕೆಂದು ಹಲವಾರು ವರ್ಷಗಳಿಂದ ಹೋರಾಟ ನಡೆಯುತ್ತಿತ್ತು ಅದು ಈಗ ಪ್ರದಾನ ಮಂತ್ರಿ ನರೇಂಧ್ರ ಮೋಧಿಯವರ ನೇತೃತ್ವದಲ್ಲಿ ನನಸಾಗಿದೆ ಎಂದರು.

ಪೂರ್ಣ ಪ್ರಮಾಣದಲ್ಲಿ ರಾಮ ಮಂದಿರ ನಿರ್ಮಾಣವಾಗುತ್ತಿದೆ. ಜ.22ರ ಕಾರ್ಯಕ್ರಮವನ್ನುನಮ್ಮದೇಶಮಾತ್ರವಲ್ಲದೆ ಪ್ರಪಂಚದ ಎಲ್ಲಾ ಭಾರತೀಯರು ಸಹಾ ವೀಕ್ಷಣೆಯನ್ನು ಮಾಡಿದ್ದಾರೆ. ಜ.22 ರಿಂದ ಈವರೆವಿಗೂ ಸುಮಾರು 1 ಕೋಟಿ ಜನತೆ ರಾಮಮಂದಿರವನ್ನು ವೀಕ್ಷಣೆ ಮಾಡಿದ್ದಾರೆ.

ಪ್ರತಿ ದಿನ 2 ರಿಂದ 4 ಲಕ್ಷ ಜನತೆ ರಾಮನನ್ನು ನೋಡುತ್ತಿದ್ದಾರೆ. ದೇಶದ ನಾನಾ ಭಾಗಗಳಿಂದ ಆಯೋಧ್ಯಗೆ ಹೋಗಲು ಕೇಂದ್ರ ಸರ್ಕಾರ ಮತ್ತು ರೈಲ್ವೆ ಇಲಾಖೆ ಅನುಕೂಲವನ್ನು ಮಾಡಿ ಕೊಟ್ಟಿದೆ.

ಪುಟ 3

## ಫಾಸ್ಟ್ ನ್ಯೂಸ್

### ಫೆ.12 ರಿಂದ 14 ರವರೆಗೆ ಚಿತ್ರದುರ್ಗ ನಗರಕ್ಕೆ ಶಾಂತಸಾಗರ ನೀರು ಸರಬರಾಜು ಸ್ಥಗಿತ

» ಚಿತ್ರದುರ್ಗ

ಚಿತ್ರದುರ್ಗ ನಗರಕ್ಕೆ ಕುಡಿಯುವ ನೀರು ಸರಬರಾಜಾಗುವ ಶಾಂತಿಸಾಗರ ನೀರು ಸರಬರಾಜು ಯೋಜನೆಯ ಕುಟ್ಟಿಗೆಹಳ್ಳಿ ಪಂಪ್‌ಹೌಸ್‌ನಿಂದ ಚಿತ್ರದುರ್ಗ ನಗರದವರೆಗೆ ಮಾರ್ಗ ಮಧ್ಯದಲ್ಲಿ ಮುಖ್ಯ ಕೊಳವೆ ಮಾರ್ಗದ ದುರಸ್ಥಿ ಕಾಮಗಾರಿ ಕೈಗೊಳ್ಳಬೇಕಾಗಿರುವುದರಿಂದ ಇದೇ ಫೆ.12 ರಿಂದ 14ರವರೆಗೆ ಶಾಂತಿಸಾಗರ ನೀರು ಸರಬರಾಜು ವ್ಯವಸ್ಥೆಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿದೆ.

ಸಾರ್ವಜನಿಕರು ತಮ್ಮ ತಮ್ಮ ಪ್ರದೇಶದಲ್ಲಿನ ಕೊಳವೆ ಬಾವಿಗಳ ನೀರನ್ನು ಮತ್ತು ಶುದ್ಧ ಕುಡುಯುವ ನೀರನ್ನು ಉಪಯೋಗಿಸಬೇಕು ಹಾಗೂ ನೀರನ್ನು ಮಿತವಾಗಿ ಬಳಸಿ ಸಾರ್ವಜನಿಕರು ನಗರಸಭೆಯೊಂದಿಗೆ ಸಹಕರಿಸಬೇಕು ಎಂದು ಚಿತ್ರದುರ್ಗ ನಗರಸಭೆ ಪೌರಾಯುಕ್ತೆ ಎಂ. ರೇಣುಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಸಂವಿಧಾನ ಜಾಗೃತಿಗಾಗಿ ಚಿತ್ರದುರ್ಗ ನಗರದಲ್ಲಿ ಬೈಕ್ ರ್‍ಯಾಲಿ



» ಚಿತ್ರದುರ್ಗ

ಸಂವಿಧಾನ ಜಾಗೃತಿಗಾಗಿ ಚಿತ್ರದುರ್ಗ ನಗರದಲ್ಲಿ ಹಮ್ಮಿಕೊಂಡಿದ್ದ ಬೈಕ್ ರ್‍ಯಾಲಿ ಗಮನ ಸೆಳೆಯಿತು. ಚಿತ್ರದುರ್ಗ ನಗರದ ಚಳ್ಳಕೆರೆ ಗೇಟ್ ಬಳಿಯಿಂದ ಪ್ರಾರಂಭಗೊಂಡ ಸಂವಿಧಾನ ಜಾಗೃತಿ ಜಾಥಾ ಬೈಕ್ ರ್‍ಯಾಲಿಯು ಮದಕರಿ ನಾಯಕ ವೃತದ ಮೂಲಕ ಸಾಗಿ ಅಂಬೇಡ್ಕರ್ ವೃತ್ತ, ಮಹಾವೀರ ವೃತ್ತ, ಗಾಂಧಿ ವೃತ್ತದ ಮೂಲಕ ಹೊಳಲ್ಕೆರೆ ರಸ್ತೆಯ ಕನಕ ವೃತ್ತ ಸೇರಿದಂತೆ ನಗರದ ಪ್ರಮುಖ ವೃತ್ತಗಳಲ್ಲಿ ಅದ್ದೂರಿಯಾಗಿ ಜಾಗೃತಿ ಜಾಥಾ ನಡೆಯಿತು. ಭಾರತ ಸಂವಿಧಾನದ ಬಗ್ಗೆ ಹೆಚ್ಚಿನ ಜಾಗೃತಿ ಮೂಡಿಸಲು ಹಮ್ಮಿಕೊಂಡಿದ್ದ ಸಂವಿಧಾನ ಜಾಗೃತಿ ಬೈಕ್ ರ್‍ಯಾಲಿಯಲ್ಲಿ ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಜಗದೀಶ್ ಹೆಬ್ಬಳ್ಳಿ, ಸಹಾಯಕ ನಿರ್ದೇಶಕ ವಿ.ಕೃಷ್ಣಮೂರ್ತಿ ಸೇರಿದಂತೆ ಸಮಾಜ ಕಲ್ಯಾಣ ಇಲಾಖೆಯ ವಸತಿ ನಿಲಯಗಳ ನಿಲಯಪಾಲಕರು, ಸಿಬ್ಬಂದಿ ಹಾಗೂ ಸಾರ್ವಜನಿಕರು ಇದ್ದರು.

### ರೈತರ 5ನೆ ದಿನದ ಧರಣಿಯಲ್ಲಿ ಭಜನೆ

» ಚಿತ್ರದುರ್ಗ

ಅನ್ನದಾತ ರೈತ ಆಸೆಗಣ್ಣಿನಿಂದ ಎದುರು ನೋಡುತ್ತಿರುವ ಭದ್ರಾಮೇಲ್ದಂಡೆ ಯೋಜನೆಗೆ ಐದು ಸಾವಿರದ ಮುನ್ನೂರು ಕೋಟಿ ರೂ.ಗಳನ್ನು ಕಾಯ್ದಿರಿಸಿ ಬಿಡುಗಡೆಗೊಳಿಸದ ಕೇಂದ್ರ ಸರ್ಕಾರದ ವಿರುದ್ದ ಕರ್ನಾಟಕ ರಾಜ್ಯ ರೈತ ಸಂಘ, ಅಖಂಡ ಕರ್ನಾಟಕ ರೈತ ಸಂಘ ಹಾಗೂ ವಿವಿಧ ಜನಪರ ಸಂಘಟನೆಗಳು ಜಿಲ್ಲಾ ಪಂಚಾಯಿತಿ ಎಂದು ಐದನೆ ದಿನದಂದು ನಡೆಸುತ್ತಿರುವ ಧರಣಿಯಲ್ಲಿ ಶುಕ್ರವಾರ ಹೊಳಲ್ಕೆರೆಯ ಟಿ.ಎಮ್ಮಿಗನೂರು ಭಜನಾ ತಂಡ ಹಾಗೂ ಹಿರಿಯೂರಿನ ಪಾಂಡುರಂಗ ಭಜನಾ ಮಂಡಳಿಯವರು ಭಜನೆಯಲ್ಲಿ ತೊಡಗಿದ್ದರು. ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರುಸೇನೆ ರಾಜ್ಯ ಕಾರ್ಯಾಧ್ಯಕ್ಷ ಈಚಘಟ್ಟದ ಸಿದ್ದವೀರಪ್ಪ, ಜಿಲ್ಲಾಧ್ಯಕ್ಷ ಮಲ್ಲಿಕಾರ್ಜುನ್ ಡಿ.ಎಸ್. ಹಳ್ಳಿ, ಹಿರಿಯೂರು ತಾಲ್ಲೂಕು ಅಧ್ಯಕ್ಷ ತಿಪ್ಪೇಸ್ವಾಮಿ, ಹನುಮೇಶ್, ರಂಗಸ್ವಾಮಿ ಇನ್ನು ಅನೇಕರು ಧರಣಿಯಲ್ಲಿ ಭಾಗವಹಿಸಿದ್ದರು.


### ರೈತ ಪರ ಬಜೆಟ್ ಮಂಡಿಸುವಂತೆ ರಾಜ್ಯ ರೈತ ಸಂಘ ಒತ್ತಾಯ

» ಚಿತ್ರದುರ್ಗ

ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಫೆ.12 ರಂದು ಮಂಡಿಸಲಿರುವ ಬಜೆಟ್ ರೈತ ಪರವಾಗಿರಬೇಕೆಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರುಸೇನೆ ರಾಜ್ಯಾಧ್ಯಕ್ಷ ವಾಸುದೇವಮಟ್ಟಿ ಒತ್ತಾಯಿಸಿದರು.ಪ್ರವಾಸಿ ಮಂದಿರದಲ್ಲಿ ರೈತರ ಜೊತೆ ಸಭೆ ನಡೆಸಿದ ಅವರು ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು 9 ತಿಂಗಳಾಯಿತು. ನೀರಾವರಿ ಯೋಜನೆಗಳು ಕುಂಠಿತಗೊಂಡಿದೆ. ಭದ್ರಾಮೇಲ್ದಂಡೆ ಯೋಜನೆ ಕಾಮಗಾರಿ ಅರೆಬರೆಯಾಗಿದೆ. ಆಲಮಟ್ಟಿ ಅಣೆಕಟ್ಟೆ ಎತ್ತರಗೊಳಿಸುವುದು, ಮಹದಾಯಿ ಯೋಜನೆ, ಬೆಣ್ಣೆಹಳ್ಳಿ, ಬಸವೇಶ್ವರ ಏತ ನೀರಾವರಿ ಯೋಜನೆ, ಇವೆಲ್ಲವುಗಳು ಪೂರ್ಣಗೊಳ್ಳಬೇಕಾಗಿರುವುದರಿಂದ ಬಜೆಟ್‌ನಲ್ಲಿ ಅನುದಾನ ಮೀಸಲಿಡಬೇಕು. ಉಚಿತ ಭಾಗ್ಯಗಳಿಗೆ 52 ಸಾವಿರ ಕೋಟಿ ರೂ.ಗಳನ್ನು ಖರ್ಚು ಮಾಡುವ ರಾಜ್ಯ ಸರ್ಕಾರ ರೈತರಿಗೆ ಅನುಕೂಲವಾಗುವ ಯೋಜನೆಗಳಿಗೆ ಏಕೆ ಹಣ ಮೀಸಲಿಡುತ್ತಿಲ್ಲ ಎಂದು ವಾಸುದೇವಮಟ್ಟಿ ಪ್ರಶ್ನಿಸಿದರು?ಬೆಳೆ ವಿಮೆ, ಫಸಲ್‌ಭೀಮ ಯೋಜನೆ ಇನ್ನು ರೈತರಿಗೆ ತಲುಪಿಲ್ಲ ಎಂದರು.

## ಪಂಚ ಗ್ಯಾರಂಟಿ ಯೋಜನೆಗಳ ಸಾರ್ಥಕ ಸಮಾವೇಶ

# 5 ವರ್ಷವೂ ಗ್ಯಾರಂಟಿ ಮುಂದುವರಿಕೆ: ಸುಧಾಕರ್



» ಚಿತ್ರದುರ್ಗ

ಗ್ಯಾರಂಟಿ ಯೋಜನೆಗಳ ಜಾರಿ ಬಗ್ಗೆ ರಾಜ್ಯದ ಶೇ.76 ರಷ್ಟು ಜನರು ಸಂತೃಪ್ತ ಭಾವ ವ್ಯಕ್ತಪಡಿಸಿರುವುದು ಸಮೀಕ್ಷೆಗಳಿಂದ ತಿಳಿದು ಬಂದಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯನವರು ಯಾವುದೇ ಕಾರಣಕ್ಕೂ ಗ್ಯಾರಂಟಿ ಯೋಜನೆಗಳನ್ನು ನಿಲ್ಲಿಸುವುದಿಲ್ಲ ಎಂದು ಈಗಾಗಲೆ ಸ್ಪಷ್ಟಪಡಿಸಿದ್ದಾರೆ. ಮುಂದಿನ 5 ವರ್ಷಗಳೂ ಕೂಡ ಗ್ಯಾರಂಟಿ ಯೋಜನೆಗಳು ಮುಂದುವರಿಯಲಿವೆ ಎಂದು ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಹೇಳಿದರು.

ಹಿರಿಯೂರು ನಗರದ ನೆಹರು ಮೈದಾನ ಆವರಣದಲ್ಲಿ ಶನಿವಾರ ಹಮ್ಮಿಕೊಂಡಿದ್ದ "ಹಿರಿಯೂರು ತಾಲ್ಲೂಕು ಹಾಗೂ ಹೋಬಳಿ ಮಟ್ಟದ ಪಂಚ ಗ್ಯಾರಂಟಿಗಳ ಈಡೇರಿಸಿದ ಸಾರ್ಥಕ ಸಮಾವೇಶ" ಉದ್ಘಾಟಿಸಿ ಅವರು ಮಾತನಾಡಿದರು.

ಚುನಾವಣೆ ಸಂದರ್ಭದಲ್ಲಿ ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸುತ್ತೇವೆ ಎಂದು ಭರವಸೆ ನೀಡಿದ್ದೆವು, ಆಗ ವಿರೋಧ ಪಕ್ಷದವರು ಇವನ್ನೆಲ್ಲ ಜಾರಿಗೊಳಿಸಲು ಆಗಲ್ಲ, ಇವರು ಸುಳ್ಳು ಹೇಳುತ್ತಿದ್ದಾರೆ ಎಂಬುದಾಗಿ ಅಪಪ್ರಚಾರ ಮಾಡಿದರು. ಆದರೆ ಜನ ಇಂತಹ ಅಪಪ್ರಚಾರವನ್ನು ಲೆಕ್ಕಿಸದೆ ನಮ್ಮನ್ನು ಆಯ್ಕೆ ಮಾಡಿದರು. ನಮ್ಮ ಸರ್ಕಾರ ಚುನಾವಣೆಗೂ ಮುನ್ನ ಜನರಿಗೆ ನೀಡಿದ ಆಶ್ವಾಸನೆಯಂತೆ ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತರುವ ಮೂಲಕ ನುಡಿದಂತೆ ನಡೆದಿದ್ದೇವೆ. ಅಧಿಕಾರಕ್ಕೆ ಬಂದ ತಿಂಗಳ ಒಳಗಾಗಿಯೇ 200 ಯುನಿಟ್ ವರೆಗೆ ಉಚಿತ ವಿದ್ಯುತ್ ನೀಡುವ "ಗೃಹಜ್ಯೋತಿ" ಹಾಗೂ ಮಹಿಳೆಯರ ಉಚಿತ ಪ್ರಯಾಣದ "ಶಕ್ತಿ "ಯೋಜನೆಗೆ ಚಾಲನೆ ನೀಡಲಾಯಿತು. ಹಂತ ಹಂತವಾಗಿ ಮನೆ ಯಜಮಾನಿಗೆ ತಿಂಗಳಿಗೆ ರೂ.2000 ನೀಡುವ "ಗೃಹಲಕ್ಷ್ಮೀ", 10 ಕೆ.ಜಿ. ಅಕ್ಕಿ ನೀಡುವ "ಅನ್ನಭಾಗ್ಯ ಯೋಜನೆ", ಪದವೀಧರ, ಡಿಪ್ಲೊಮಾ ಉತ್ತೀರ್ಣರಾದವರಿಗೆ ಎರಡು ವರ್ಷಗಳವರೆಗೆ ನಿರುದ್ಯೋಗ ಭತ್ಯೆ ನೀಡುವ "ಯುವನಿಧಿ" ಯೋಜನೆಗಳನ್ನು ಜಾರಿಗೆ ತಂದಿದ್ದೇವೆ. ನಮ್ಮದು ಕೆಲಸ ಮಾಡುವ ಹಾಗೂ ನೀಡಿದ ಭರವಸೆಯನ್ನು ಈಡೇರಿಸುವ ಸರ್ಕಾರವಾಗಿದೆ. ಗ್ಯಾರಂಟಿ ಯೋಜನೆಗಳಿಂದ ಕುಟುಂಬದಲ್ಲಿ ಆರ್ಥಿಕ ಬಲ ಬಂದಿದ್ದು, ಜೀವನ ಮಟ್ಟ ಸುಧಾರಣೆ ಹಾಗೂ ನಿರ್ವಹಣೆ ಸುಲಭವಾಗಿದೆ. ಗ್ಯಾರಂಟಿ ಯೋಜನೆಗಳಿಂದ ಬಡವರು, ಮಧ್ಯಮ ವರ್ಗದವರಿಗೆ ಬಹಳ ಅನುಕೂಲವಾಗಿದೆ ಎಂದರು.

ಮುಂದಿನ ವರ್ಷದ ವೇಳೆಗೆ ಹಿರಿಯೂರಿನ ತಾಲ್ಲೂಕಿನ ಎಲ್ಲಾ ಹಳ್ಳಿಗಳಿಗೆ ವಿ.ವಿ. ಸಾಗರ ಜಲಾಶಯದಿಂದ ಕುಡಿಯುವ ನೀರು ಹರಿಸಲಾಗುವುದು. ಈಗಾಗಲೇ ಹರ್ತಿಕೋಟೆ ಭಾಗದ 40 ಹಳ್ಳಿ, ಧರ್ಮಪುರ, ಐಮಂಗಲ ಹಾಗೂ ಜವಗೊಂಡನಹಳ್ಳಿ ಸೇರಿ 170 ಹಳ್ಳಿಗಳಿಗೆ ಕುಡಿಯುವ ನೀರಿನ ಕಾಮಗಾರಿಗೆ ಟೆಂಡರ್ ಕರೆಯಲಾಗಿದೆ. ಶೀಘ್ರದಲ್ಲಿ ಗುದ್ದಲಿ ಪೂಜೆ ನೆರವೇರಿಸಲಾಗುವುದು ಎಂದರು. ಈಗಾಗಲೇ ಪೂರ್ಣಗೊಂಡಿರುವ ಐಮಂಗಲ ಹೋಬಳಿಯ 39 ಗ್ರಾಮಗಳಿಗೆ ಕುಡಿಯುವ ನೀರು ಪೂರೈಕೆ ಯೋಜನೆಗೆ ಚಾಲನೆ ಮುಂದಿನ ವಾರದಲ್ಲಿ ಚಾಲನೆ ನೀಡಲಾಗುವುದು ಎಂದು ಸಚಿವ ಡಿ.ಸುಧಾಕರ್ ಹೇಳಿದರು.

ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳು ಸಮರ್ಪಕ ಅನುಷ್ಠಾನ ಹಾಗೂ ಅರ್ಹ ಫಲಾನುಭವಿಗಳಿಗೆ ಅದು ತಲುಪಿದೆಯೇ ಎಂಬುದನ್ನು ಪರಿಶೀಲಿಸಲು ತಾಲ್ಲೂಕು ಮತ್ತು ಹೋಬಳಿ ಮಟ್ಟದಲ್ಲಿ ಸಮಾವೇಶ ಹಮ್ಮಿಕೊಳ್ಳಲಾಗುತ್ತಿದೆ. ಸರ್ಕಾರದ ಯೋಜನೆಗಳ ಕಟ್ಟಕಡೆಯ ವ್ಯಕ್ತಿಗೂ ತಲುಪುವುದು ಮುಖ್ಯ. ಅರ್ಹ ಫಲಾನುಭವಿಗಳು ಯೋಜನೆಗಳಿಂದ ವಂಚಿತರಾಗಬಾರದು.ಸರ್ಕಾರದಗ್ಯಾರಂಟಿ ಯೋಜನೆಗಳನ್ನು ಅರ್ಹ ಫಲಾನುಭವಿಗಳು ಸದ್ಭಳಕೆ ಮಾಡಿಕೊಳ್ಳಬೇಕು ಎಂದು ತಿಳಿಸಿದರು.

ಹಿರಿಯೂರು ತಹಶೀಲ್ದಾರ್ ರಾಜೇಶ್ ಕುಮಾರ್ ಪ್ರಾಸ್ತಾವಿಕವಾಗಿ ಮಾತನಾಡಿ, ಸರ್ಕಾರ ಐದು ಗ್ಯಾರಂಟಿ ಯೋಜನೆಗಳನ್ನು ಯಶಸ್ವಿಯಾಗಿ ಜಾರಿಗೊಳಿಸಿದೆ.ಹಿರಿಯೂರುತಾಲ್ಲೂಕಿನಲ್ಲಿ ಅನ್ನಭಾಗ್ಯ ಯೋಜನೆಯಡಿ 65,019 ಕುಟುಂಬಗಳು,ಗೃಹಲಕ್ಷ್ಮೀ ಯೋಜನೆಯಡಿ 66,014 ಫಲಾನುಭವಿಗಳು, ಗೃಹಜ್ಯೋತಿ ಯೋಜನೆಯಡಿ 64,778 ಕುಟುಂಬಗಳು ಪ್ರಯೋಜನ ಪಡೆದಿವೆ. ಶಕ್ತಿ ಯೋಜನೆಯಡಿ ಮಹಿಳೆಯರು ಸರ್ಕಾರದ ಸಾರಿಗೆ ಬಸ್‌ಗಳಲ್ಲಿ ಉಚಿತವಾಗಿ ಪ್ರಯಾಣ ಮಾಡುತ್ತಿದ್ದಾರೆ. ಹಿರಿಯೂರು ತಾಲ್ಲೂಕಿನಲ್ಲಿ ಯುವನಿಧಿ ಯೋಜನೆಯಡಿ 517 ಫಲಾನುಭವಿಗಳು ನೋಂದಣಿಯಾಗಿದ್ದಾರೆ ಎಂದು ಮಾಹಿತಿ ನೀಡಿದರು. ಪಂಚ ಗ್ಯಾರಂಟಿ ಯೋಜನೆಗಳ ಬಗ್ಗೆ ಕುಂದುಕೊರತೆಗಳು ಇದ್ದಲ್ಲಿ ತೆರೆಯಲಾಗಿರುವ ಸೇವಾಸಿಂಧು ಕೌಂಟರ್‌ನಲ್ಲಿ ದೂರು ಸಲ್ಲಿಸಿದರೆ ಸಂಬಂಧಪಟ್ಟ ತಾಲ್ಲೂಕು ಮಟ್ಟದ ಅಧಿಕಾರಿಗಳು ತಕ್ಷಣ ನೋಡಿ ತಾಂತ್ರಿಕ ಸಮಸ್ಯೆ ಇದ್ದಲ್ಲಿ ಬಗೆಹರಿಸಿಕೊಡುವರು ಎಂದರು.

ಕಾರ್ಯಕ್ರಮಕ್ಕೆ ಆಗಮಿಸಿದ್ದ ಫಲಾನುಭವಿ ಹಿರಿಯೂರಿನ ಸುಜಾತ ತನ್ನ ಅನಿಸಿಕೆ ವ್ಯಕ್ತಪಡಿಸಿ, ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳು ಸಂತಸ ತಂದಿದೆ. ಅನ್ನಭಾಗ್ಯ ಯೋಜನೆಯಡಿ 5 ಕೆ.ಜಿ ಅಕ್ಕಿ ನೀಡುತ್ತಿದ್ದು, 5 ಕೆ.ಜಿ ಅಕ್ಕಿಯ ಬದಲು ಹಣ ನೀಡಲಾಗುತ್ತಿದೆ. ಇದರಲ್ಲಿ ಮನೆಗೆ ಬೇಕಾದ ಇತರೆ ದವಸ ಧಾನ್ಯಗಳನ್ನು ಖರೀದಿ ಮಾಡುತ್ತಿದ್ದೇನೆ. ನೂರಿನ್ನೂರು ರೂ. ಹಣಕ್ಕೂ ಇತರರಲ್ಲಿ ಕೈಚಾಚುವ ಅಗತ್ಯ ಈಗಿಲ್ಲ. ಗೃಹಲಕ್ಷ್ಮೀ ಯೋಜನೆಯಡಿ ರೂ.2000 ಹಣ ನನ್ನ ಖಾತೆಗೆ ಜಮೆಯಾಗುತ್ತಿದೆ. 5 ತಿಂಗಳ ಹಣ ರೂ.10,000 ಹಾಗೂ ನನ್ನ ವೈಯಕ್ತಿಕ ಹಣ 4 ಸಾವಿರ ಜೋಡಿಸಿ, ಹಿರಿಯೂರು ನಗರದ ಖಾಸಗಿ ಶಾಲೆಯಲ್ಲಿ ಓದುತ್ತಿರುವ ನನ್ನ ಮಗಳ ವಾರ್ಷಿಕ ಶಾಲಾ ಶುಲ್ಕ ತುಂಬಿದ್ದೇನೆ. ಇದರಿಂದ ಮಕ್ಕಳ ವಿದ್ಯಾಭ್ಯಾಸಕ್ಕೆ ಸಹಕಾರಿಯಾಗಿದೆ. ಈ ಹಣವನ್ನು ನಾವು ವ್ಯರ್ಥವಾಗಿ ಖರ್ಚು ಮಾಡುತ್ತಿಲ್ಲ. ಶಕ್ತಿ ಯೋಜನೆಯು ಮಹಿಳೆಯರಿಗೆತುಂಬಾಅನುಕೂಲವಾಗಿದೆ. ನನ್ನ ತಾಯಿ ಅವರಿಗೆ ಆರೋಗ್ಯದಲ್ಲಿ ಏರುಪೇರು ಆದಾಗ ದಾವಣಗೆರೆ ಹೋಗಿ ಬರಬೇಕಾದ ಸಂದರ್ಭ ಒದಗಿಬಂದಿತು. ಹಿರಿಯೂರಿನಿಂದ ದಾವಣಗೆರೆಗೆ ಹೋಗಲು 150 ಹಾಗೂ ಮರಳಿ ಬರಲು 150 ಬೇಕು. ಬೇರೆ ಸಂದರ್ಭವಾಗಿದ್ದರೆ ನಾನು ತಾಯಿಯನ್ನು ನೋಡಲು ಹೋಗುವುದು ದುಸ್ತರವಾಗುತಿತ್ತು. ಆದರೆ ಇದೀಗ ಆಧಾರ್ ಕಾರ್ಡ್ ಇಟ್ಟುಕೊಂಡು ಉಚಿತವಾಗಿ ಬಸ್ ಪ್ರಯಾಣಿಸಬಹುದು. ಗೃಹಜ್ಯೋತಿ ಯೋಜನೆಯಡಿ 200 ಯುನಿಟ್‌ವರೆಗೂ ಉಚಿತ ವಿದ್ಯುತ್ ನೀಡಲಾಗಿದೆ. ಈ ಮೊದಲು ತಿಂಗಳ ವಿದ್ಯುತ್ ಬಿಲ್ ಬಂದಾಗ ಶಾಕ್ ಆಗುತ್ತಿತ್ತು. ಬಿಲ್ ಪಾವತಿ ಬಗ್ಗೆ ಚಿಂತಿಸುತ್ತಿದ್ದೆ. ಗ್ಯಾರಂಟಿ ಯೋಜನೆಗಳು ಬಡವರಿಗೆ ತುಂಬಾ ಅನುಕೂಲವಾಗಿದೆ. ನಮ್ಮಂತಹ ಬಡ ಜನರ ಏಳಿಗೆಗಾಗಿ ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿದ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಇಲ್ಲಿಂದಲೇ ನಮಸ್ಕಾರ ಮಾಡೇನೆ. ಸಾಧ್ಯವಾದರೆ ಬೆಂಗಳೂರಿಗೆ ತೆರಳಿ, ಅವರನ್ನು ಭೇಟಿ ಮಾಡಿ ಧನ್ಯವಾದ ತಿಳಿಸುವ ಆಸೆ ಇದೆ ಎಂದು ಹೇಳಿದರು. ಇದೇ ಸಂದರ್ಭದಲ್ಲಿ ಮೊತ್ತೋರ್ವ ಫಲಾನುಭವಿ ಸುಜಾತ ಕೂಡ ತಮ್ಮ ಅನಿಸಿಕೆಯನ್ನು ವೇದಿಕೆಯ ಮೇಲೆ ಹಂಚಿಕೊಂಡರು.

ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಸತೀಶ್ ಕುಮಾರ್ ಸ್ವಾಗತಿಸಿದರು. ಜಿ.ಪಂ. ಮಾಜಿ ಅಧ್ಯಕ್ಷೆ ಶಶಿಕಲಾ ಸುರೇಶ್‌ಬಾಬು, ಮಾಜಿ ಸದಸ್ಯರಾದ ಗೀತಾ, ನಾಗೇಂದ್ರನಾಯ್ಕ್, ತಾ.ಪಂ. ಮಾಜಿ ಅಧ್ಯಕ್ಷೆ ಸುಜಾತಾ, ಹಿರಿಯೂರು ನಗರ ಸಭೆ ಪೌರಾಯುಕ್ತ ಮಹಾಂತೇಶ್, ನಗರ ಸಭೆ ಸದಸ್ಯರಾದ ಮಹೇಶ್, ತಿಪ್ಪೇಸ್ವಾಮಿ, ಶಿವರಂಜನಿ, ಸಮೀವುಲ್ಲಾ, ದಾದಪೀರ್, ಗಣೇಶ್, ಅಪೂರ್ವ, ಅಂಬಾಬಾಯಿ ಸೇರಿದಂತೆ ಇತರೆ ಸದಸ್ಯರು, ಹಿರಿಯೂರು ತಾಲ್ಲೂಕಿನ ವಿವಿಧ ಗ್ರಾಮ ಪಂಚಾಯಿತಿ ಅಧ್ಯಕ್ಷರು, ಸದಸ್ಯರು, ಫಲಾನುಭವಿಗಳು ಇದ್ದರು.

# ಜೀತ ಪದ್ಧತಿ ನಿರ್ಮೂಲನಾ ದಿನಾಚರಣೆ



» ಚಿತ್ರದುರ್ಗ

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ಜೀತ ಪದ್ಧತಿ ನಿರ್ಮೂಲನಾ ದಿನಾಚರಣೆ ಅಂಗವಾಗಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಅವರು ಜೀತ ಪದ್ಧತಿ ನಿರ್ಮೂಲನಾ ದಿನಾಚರಣೆಯ ಪ್ರತಿಜ್ಞಾವಿಧಿ ಬೋಧಿಸಿದರು.ಕರ್ನಾಟಕವನ್ನು ಜೀತ ವಿಮುಕ್ತಗೊಳಿಸಲು, ಸಂಕಷ್ಟದಲ್ಲಿರುವ ಸಮುದಾಯಗಳ ಜನರಿಗೆ ನ್ಯಾಯ ಒದಗಿಸಲು ನನ್ನ ಸೇವೆಯನ್ನು ಮುಡುಪಾಗಿಡುತ್ತೇನೆ. ಈ ಮೂಲಕ ಸಮಾನತೆಯನ್ನು ಸಾಧಿಸಲು ಪ್ರಾಮಾಣಿಕ ಪ್ರಯತ್ನವನ್ನು ಮಾಡುತ್ತೇನೆ ಎಂದು ಈ ಮೂಲಕ ಪ್ರತಿಜ್ಞೆ ಮಾಡುತ್ತೇನೆ ಎಂಬ ಪ್ರತಿಜ್ಞಾವಿಧಿ ಬೋಧಿಸಲಾಯಿತು.

ಆಟೋ ಪ್ರಚಾರಕ್ಕೆ ಚಾಲನೆ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಪೊಲೀಸ್ ಇಲಾಖೆ, ಕಾರ್ಮಿಕ ಇಲಾಖೆ ಹಾಗೂ ಸ್ವಯಂ ಸೇವಾ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ಶುಕ್ರವಾರ ನಗರದ ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ ಜೀತ ಪದ್ಧತಿ ನಿರ್ಮೂಲನಾ ದಿನಾಚರಣೆ ಅಂಗವಾಗಿ ಜನರಲ್ಲಿ ಜಾಗೃತಿ ಮೂಡಿಸಲು ಆಟೋ ಮೂಲಕ ಪ್ರಚಾರ ಕಾರ್ಯಕ್ರಮಕ್ಕೆ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಅವರು ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಬಾಲಕಾರ್ಮಿಕ ಯೋಜನಾ ಸೊಸೈಟಿಯ ಯೋಜನಾ ನಿರ್ದೇಶಕ ಪಿ.ಸತೀಶ್ ಕುಮಾರ್ ಸೇರಿದಂತೆ ಜಿಲ್ಲಾಧಿಕಾರಿಗಳ ಕಚೇರಿ, ಉಪವಿಭಾಗಾಧಿಕಾರಿಗಳ ಕಚೇರಿ ಸಿಬ್ಬಂದಿ ವರ್ಗದವರು ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಇದ್ದರು.

### ದೇವರ ಎತ್ತುಗಳಿಗೆ ಮೇವು ನೀಡಿದ ವಾಲ್ಮೀಕಿ ನಾಯಕ ಮಹಾಸಭಾ



» ಮೊದಲ ಪುಟದಿಂದ

ಈ ಭಾಗದಲ್ಲಿ ಶಾಶ್ವತ ಮೇವು, ನೀರಿನ ವ್ಯವಸ್ಥೆ ಮಾಡುವ ಉದ್ದೇಶದಿಂದ ಶ್ರೀವಾಲ್ಮೀಕಿ ಪುಣ್ಯಾನಂದಪುರಿ ಮಹಾಸ್ವಾಮಿ, ಸಾಲುಮರದ ತಿಮ್ಮಕ್ಕ ಮತ್ತು ನಟ ಸುದೀಪರವರನ್ನು ಭೇಟಿ ಮಾಡಿ ದೇವರ ಎತ್ತುಗಳು ಇರುವ ಸ್ಥಳದಲ್ಲಿ ಶಾಶ್ವತ ಮೇವು ಬೆಳೆಯುವ ಯೋಜನೆ ರೂಪಿಸಲು ಮನವಿ ಮಾಡಲಾಗುವುದು. ಪ್ರಸ್ತುತ ನಮ್ಮ ಸಂಘಟನೆ, ಸ್ನೇಹಿತರು ಗೋರಕ್ಷಣೆ, ಬುಡಕಟ್ಟು ಪರಂಪರೆ ರಕ್ಷಣೆ ಮಾಡುವ ಉದ್ದೇಶದಿಂದ ಈ ಕಾರ್ಯಕೈಗೊಂಡಿದ್ದೇವೆ ಎಂದರು. ಮಂಜುನಾಥ ಮಾತನಾಡಿ, ಗೋಪರಂಪರೆ ನಮ್ಮ ಸಂಸ್ಕೃತಿ, ಅತಿ ಹೆಚ್ಚು ಅಮೃತ ಮಹಲ್ ಗೋವುಗಳು ಉಳಿಯಲು ಮ್ಯಾಸಬೇಡ ಆರಾಧನೆಯೂ ಮೂಲ ಕಾರಣವಾಗಿದೆ. ಅತಿಹೆಚ್ಚು ಗೋರಕ್ಷಣೆ ಮಾಡುವಲ್ಲಿ ಈ ಸಮುದಾಯ ಶ್ರಮಿಸುತ್ತಿದೆ. ಇವರ ನೆರವಿಗೆ ಸರ್ಕಾರ ದಾವಿಸಬೇಕಿದೆ, ಬಜೆಟ್ ನಲ್ಲಿ ಪ್ರತ್ಯೇಕ ಹಣ ಮೀಸಲಿಟ್ಟು ಶಾಶ್ವತ ಪರಿಹಾರ ಕಲ್ಪಿಸಬೇಕು. ರಾಜಕೀಯ ವ್ಯಕ್ತಿಗಳ ಇಚ್ಛಾಶಕ್ತಿ ಕೊರತೆಯಿಂದ ದೇವರ ಎತ್ತುಗಳಿಗೆ ಮೇವಿಲ್ಲದೆ ಸೊರಗಿವೆ. ಗೋರಕ್ಷಣೆ ನಮ್ಮ ಆದ್ಯ ಕರ್ತವ್ಯವಾಗಬೇಕಿದೆ. ಈ ನಿಟ್ಟಿನಲ್ಲಿ ಸರ್ಕಾರಗಳು ಕಾರ್ಯಪ್ರವೃತರಾಗಬೇಕು ಇಲ್ಲವಾದಲ್ಲಿ ನಮ್ಮ ಸಂಘಟನೆಯಿಂದ ಉಗ್ರಹೋರಾಟ ನಡೆಸಬೇಕಾಗುತ್ತದೆ ಎಂದರು.

### ವೈಯಕ್ತಿಕ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನ

» ದಾವಣಗೆರೆ

ಪ್ರಸಕ್ತ ಸಾಲಿನ ಶೆ.24.10%, 7.25% ಮತ್ತು 5% ಯೋಜನೆಯಡಿಯಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ, ಅಲ್ಪಸಂಖ್ಯಾತರ ಮತ್ತು ದೈಹಿಕ ವಿಕಲಚೇತನರ ಅರ್ಹ ಫಲಾನುಭವಿಗಳಿಗೆ ವೈಯಕ್ತಿಕ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ನಮೂನೆಯನ್ನು ಜಗಳೂರು ಪಟ್ಟಣ ಪಂಚಾಯಿತಿಯಲ್ಲಿ ಪಡೆದು ಅಗತ್ಯ ದಾಖಲೆಗಳೊಂದಿಗೆ ಫೆ.23 ರೊಳಗಾಗಿ ಕಚೇರಿಗೆ ಸಲ್ಲಿಸಬೇಕು ಎಂದು ಪಟ್ಟಣ ಪಂಚಾಯಿತಿಯ ಮುಖ್ಯಾಧಿಕಾರಿ ಸಿ.ಲೋಕ್ಯಾನಾಯ್ಕ ತಿಳಿಸಿದ್ದಾರೆ.

## ಪ್ರಮುಖ ಸುದ್ದಿ

### ಕುಷ್ಠ ರೋಗ ಮುಕ್ತ ಭಾರತ ನಿರ್ಮಾಣದಲ್ಲಿ ಸರ್ವರ ಸಹಕಾರ ಅಗತ್ಯ ಜಿಲ್ಲೆಯಾದ್ಯಂತ ಜಾಗೃತಿ ಕಾರ್ಯಕ್ರಮಗಳು

# ಸ್ಪರ್ಶ ಕುಷ್ಠ ಜಾಗೃತಿ ಅಭಿಯಾನ 2024

» ಚಿತ್ರದುರ್ಗ

ಕುಷ್ಠರೋಗ ಮುಕ್ತ ಭಾರತ ನಿರ್ಮಾಣ ಮಾಡುವಲ್ಲಿ ಸಾರ್ವಜನಿಕರ ಸಹಕಾರ ಅಗತ್ಯವಾಗಿದ್ದು,ಜನರಿಗೆ ರೋಗದ ಬಗೆಗಿನ ಮಾಹಿತಿ ನೀಡಿ, ತಪ್ಪು ಕಲ್ಪನೆಗಳನ್ನು ನಿವಾರಿಸುವ ನಿಟ್ಟಿನಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ವಿವಿಧ ಇಲಾಖೆಗಳ ಸಹಯೋಗದಲ್ಲಿ ಜಿಲ್ಲೆಯಾದ್ಯಂತ "ಸ್ಪರ್ಶ ಕುಷ್ಠ ಜಾಗೃತಿ ಅಭಿಯಾನ" ವನ್ನು ಹಮ್ಮಿಕೊಂಡಿದೆ.

ವಿಶ್ವ ಕುಷ್ಠರೋಗ ದಿನವನ್ನು ಪ್ರತಿ ವರ್ಷ ಜನವರಿ ತಿಂಗಳ ಕೊನೆಯ ಭಾನುವಾರದಂದು ಆಚರಿಸಲಾಗುತ್ತದೆ. ಭಾರತದಲ್ಲಿ ಜನವರಿ 30 ರಂದು ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರು ಹುತಾತ್ಮರಾದ ದಿನದ ಅಂಗವಾಗಿ ಆಚರಿಸಲಾಗುವುದು.

"ಕಳಂಕವನ್ನು ಕೊನೆಗೊಳಿಸಿ, ಘನತೆಯನ್ನು ಎತ್ತಿ ಹಿಡಿಯಿರಿ" ಎಂಬುದು ಈ ವರ್ಷದ ಧ್ಯೇಯ ವಾಕ್ಯವಾಗಿದೆ. ಕುಷ್ಠರೋಗದ ಬಗೆಗಿರುವ ಅಪನಂಬಿಕೆಗಳನ್ನುಹೋಗಲಾಡಿಸುವುದರ ಜೊತೆಗೆ ಕುಷ್ಠರೋಗ ಪೀಡಿತರ ಬದುಕಿಗೆ ಬೆಳಕು ಚೆಲ್ಲುವ ಉದ್ದೇಶದಿಂದ ಜಿಲ್ಲೆಯಲ್ಲಿ ಕುಷ್ಠ ಜಾಗೃತಿ ಅಭಿಯಾನ ಆಯೋಜಿಸಲಾಗಿದೆ.

ಕುಷ್ಠರೋಗದ ಬಗ್ಗೆ ಜನರಲ್ಲಿ ಇರುವ ತಪ್ಪು ಕಲ್ಪನೆಗಳು, ಮೂಢ ನಂಬಿಕೆಗಳನ್ನು ತೊಡೆದುಹಾಕಲು, ಜನರಲ್ಲಿ ಜಾಗೃತಿ ಮತ್ತು ಅರಿವು ಮೂಡಿಸುವುದರಿಂದ ಮಾತ್ರ ಸಾಧ್ಯ. ರೋಗ ಲಕ್ಷಣಗಳ ಬಗ್ಗೆ ಹಾಗೂ ಅದರ ದುಷ್ಪರಿಣಾಮಗಳ ಬಗ್ಗೆ ಜನರಲ್ಲಿ ತಿಳುವಳಿಕೆ ಮೂಡಿಸುವ ಕಾರ್ಯ ಅಭಿಯಾನದ ಮೂಲಕ ನಡೆಯುತ್ತಿದೆ. ಕುಷ್ಠರೋಗ ಸಂಪೂರ್ಣ ವಾ ಸಿ ಂ ಯ ಾ ಗ ಬ ಹ ು ದಾ ದ ಂ ತ ಹ ರೋಗವಾಗಿದ್ದು, ಆರಂಭಿಕ ಹಂತದಲ್ಲಿಯೇ ಇದನ್ನು ಪತ್ತೆ ಹಚ್ಚಿದಲ್ಲಿ, ಅತ್ಯಂತ ತ್ವರಿತವಾಗಿ ಗುಣಪಡಿಸುವುದು ಸುಲಭ. ಇನ್ನು ಇದಕ್ಕೆ ಅಗತ್ಯವಿರುವ ಸಕಲ ರೀತಿಯ ಔಷದೋಪಚಾರಗಳು ಎಲ್ಲ ಸರ್ಕಾರಿ ಆಸ್ಪತ್ರೆಗಳಲ್ಲಿ ಉಚಿತವಾಗಿ ಲಭ್ಯವಿದೆ. ಕುಷ್ಠರೋಗವನ್ನು ಆರಂಭಿಕ ಹಂತದಲ್ಲಿಯೇ ಪತ್ತೆಹಚ್ಚಲು ಆರೋಗ್ಯ ಇಲಾಖೆಯು ಆಶಾ ಕಾರ್ಯಕರ್ತೆಯರ ಮೂಲಕ ಮನೆ ಮನೆ ಭೇಟಿ ಕಾರ್ಯಕ್ರಮ ಜರುಗುತ್ತಿದೆ. ಚರ್ಮದ ಮೇಲ್ಭಾಗದಲ್ಲಿ ಮಚ್ಚೆಗಳು, ದೇಹದ ಯಾವುದೇ ಭಾಗದಲ್ಲಿ ತಿಳಿಬಿಳಿ ಅಥವಾ ತಾಮ್ರ ಬಣ್ಣದ ಒಂದು ಅಥವಾ ಹಲವಾರು ಮಚ್ಚೆಗಳು ಕಂಡುಬರುವುದು, ಈ ಮಚ್ಚೆಗಳ ಮೇಲೆ ಸ್ಪರ್ಶ ಜ್ಞಾನ ಇಲ್ಲದಿರುವುದು, ಚರ್ಮದ ಮೇಲೆ ಗಂಟುಗಳು, ಹೊಳಪಿನಿಂದ ಕೂಡಿದ ದಪ್ಪನಾದ ಚರ್ಮ ಮತ್ತು ಚರ್ಮದ ಮೇಲೆ ಸಣ್ಣ ಗಂಟುಗಳು, ವಿಶೇಷವಾಗಿ ಕಿವಿಯ ಹಾಲೆ, ಮುಖ ಮತ್ತು ಕೈಕಾಲುಗಳ ಮೇಲೆ ಕಾಣಬಹುದಾಗಿದೆ. ಕೈ ಪಾದ ಮತ್ತು ಕಣ್ಣುಗಳಲ್ಲಿ ಬಲಹೀನತೆ, ಅಂಗಾಲುಗಳಲ್ಲಿ ಹುಣ್ಣು, ಕಣ್ಣುಗಳನ್ನು ಪೂರ್ಣವಾಗಿ ಮುಚ್ಚಲು ಆಗದಿರುವುದು ರೀ ರೀತಿಯ ಲಕ್ಷಣಗಳು ಕಂಡುಬಂದಲ್ಲಿ ಕೂಡಲೆ ಸಮೀಪದ ಆಸ್ಪತ್ರೆಯಲ್ಲಿ ವೈದ್ಯರಿಗೆ ತೋರಿಸಿ, ಪರೀಕ್ಷಿಸಿಕೊಳ್ಳಬೇಕು.

ಸಕಾಲದಲ್ಲಿ ಔಷಧಿ, ಚಿಕಿತ್ಸೆ ಪಡೆಯುವುದರಿಂದ ಸಂಪೂರ್ಣ ಗುಣ ಮತ್ತು ಅಂಗವಿಕಲತೆಯನ್ನು ತಡೆಗಟ್ಟಬಹುದು. ಚಿಕಿತ್ಸೆಯ ಅವಧಿ ಕೇವಲ 06 ಅಥವಾ 12 ತಿಂಗಳು ಮನೆಯಲ್ಲಿಯೇ ಚಿಕಿತ್ಸೆ ಪಡೆಯಬಹುದು, ಅದೂ ಕೂಡ ಸಂಪೂರ್ಣ ಉಚಿತವಾಗಿ.

ಕುಷ್ಠರೋಗವು ಮೈಕೋಬ್ಯಾಕ್ಟೀರಿಯಂ ಲೆಪ್ರೇ, ಎಂಬ ರೋಗಾಣುವಿನಿಂದ ಬರುತ್ತದೆ, ಮತ್ತು ಇದನ್ನು ಸುಲಭವಾಗಿ ಗುಣಪಡಿಸಬಹುದು ಎಂಬ ಸಾಮಾನ್ಯ ಅರಿವು ಮೂಡಿಸುವುದು ಅಭಿಯಾನದ ಉದ್ದೇಶವಾಗಿದೆ.

ಯಾವುದೇ ರೀತಿಯ ಕುಷ್ಠರೋಗ ಲಕ್ಷಣಗಳು ಕಂಡು ಬಂದಲ್ಲಿ ಕುಟುಂಬದವರೇ ಆಗಿರಲಿ, ನೆರೆ–ಹೊರೆ ಹಾಗೂ ಸಮುದಾಯದಲ್ಲಿ ಯಾರೆ ಕುಷ್ಟರೋಗಿ ಕಂಡು ಬಂದಲ್ಲಿ, ಅವರಿಗೆ ಆರೋಗ್ಯ ಇಲಾಖೆಯಲ್ಲಿ ದೊರೆಯುವ ಉಚಿತ ಚಿಕಿತ್ಸೆಕೊಡಿಸುವುದು, ಕುಷ್ಟರೋಗಿಗಳನ್ನು ಪ್ರೀತಿ ವಿಶ್ವಾಸದಿಂದ ನೋಡಿಕೊಂಡು ಅವರ ಆತ್ಮ ಗೌರವಕ್ಕೆ ಧಕ್ಕೆ ಉಂಟಾಗದಂತೆ ನಡೆದುಕೊಳ್ಳಬೇಕು. ಕುಷ್ಠರೋಗದ ಬಗ್ಗೆ ಇರುವ ಮೂಢನಂಬಿಕೆಗಳನ್ನು ತೊಡೆದುಹಾಕಿ, ಕುಷ್ಟರೋಗಿಗಳಿಗೆ ಸಮಾಜದ ಮುಖ್ಯವಾಹಿನಿಯಲ್ಲಿ ಗೌರವಯುತವಾಗಿ ಬದುಕಲು ಅವಕಾಶ ಮಾಡಿಕೊಡಬೇಕು ಹಾಗೂ ಗಾಂಧೀಜಿಯವರ ಕನಸಾದ ಕುಷ್ಠರೋಗ ಮುಕ್ತ ಭಾರತವನ್ನು ಕಟ್ಟಲು ಶ್ರಮಿಸಬೇಕು ಎಂಬುದು ಆರೋಗ್ಯ ಇಲಾಖೆಯ ಆಶಯವಾಗಿದೆ.

## ಫಾಸ್ಟ್ ನ್ಯೂಸ್

### ರಾಮನ ದರ್ಶನಕ್ಕೆ ಚಿತ್ರದುರ್ಗದಿಂದ 415 ಮಂದಿ ಪ್ರಯಾಣ

» ಮೊದಲ ಪುಟದಿಂದ

ಮುಂದಿನ 2024ರ ಲೋಕಸಭಾ ಚುನಾವಣೆಯಲ್ಲಿ ಮತ್ತೇ ನರೇಂದ್ರ ಮೋದಿ ನೇತೃತ್ವದ ಸರ್ಕಾರ ಅಸ್ಥಿತ್ವಕ್ಕೆ ಬರಲಿದೆ. 400ಕ್ಕೂ ಹೆಚ್ಚು ಸ್ಥಾನಗಳನ್ನು ಗೆಲ್ಲುವುದರ ಮೂಲಕ ಅಧಿಕಾರವನ್ನು ಪಡೆಯಲಿದೆ ಎಂದರು.

ಆಯೋಧ್ಯಯ ಶ್ರೀರಾಮ ದರ್ಶನ ಅಭಿಯಾನದ ಸಂಚಾಲಕರಾದ ಜಗದೀಶ್ ಹಿರೇಮನಿ ಮಾತನಾಡಿ, ರಾಮ ಮಂದಿರ ನಿರ್ಮಾಣದ ಕನಸು ಈಗ ನನಸಾಗಿದೆ. ಇದರ ಭೇಟಿಗಾಗಿ ಕೇಂದ್ರ ಸರ್ಕಾರ ದೇಶದಲ್ಲಿನ ಜನತೆಗೆ ವಿಶೇಷವಾದ ರೈಲುನ್ನು ಬಿಡುವುದರ ಮೂಲಕ ಎಲ್ಲರಿಗೂ ಸಹಾ ರಾಮನ ದರ್ಶನಕ್ಕೆ ಅವಕಾಶವನ್ನು ಕಲ್ಪಿಸಿದೆ. ರಾಜ್ಯದಿಂದ ಈಗಾಗಲೇ ತುಕೂರಿನಿಂದ ಪ್ರಥಮವಾಗಿ ಆಯೋಧ್ಯಗೆ ಭಕ್ತಾಧಿಗಳನ್ನು ಕಳುಹಿಸಲಾಗಿದೆ, ಈಗ ಕೋಟೆನಾಡು ಚಿತ್ರದುರ್ಗದಿಂದ ಎರಡನೇ ರೈಲು ಹೋಗುತ್ತಿದೆ. ಭಾರತ ದೇಶ ಹಿಂದುತ್ವದ ಅಲೆ ಮೇಲೆ ನಿರ್ಮಾಣವಾಗುತ್ತಿದೆ. ಭಾವೈಕತ್ಯೆಯ ಮೇಲೆ ರೂಪುಗೊಳ್ಳುತ್ತಿದೆ. ರಾಮ ರಾಜ್ಯ ನಿರ್ಮಾಣಕ್ಕೆ ಪಣ ತೊಡಬೇಕಿದೆ ಎಂದರು.

ಕಾರ್ಯಕ್ರಮದಲ್ಲಿ ಮಾಜಿ ಶಾಸಕರಾದ ತಿಪ್ಪೇಸ್ವಾಮಿ, ಬಿಜೆಪಿ ಜಿಲ್ಲಾಧ್ಯಕ್ಷರಾದ ಎ.ಮುರಳಿ, ರೈಲ್ವೆ ಇಲಾಖೆಯ ಡಿಆರ್‌ಎಂ. ಶಿಲ್ಪ ಆಗರವಾಲ್, ರವಿಚಂದನ್, ವಿಜಯೇಂದ್ರ, ಮೋಹನ್, ಶಿವಣ್ಣಚಾರ್, ನಾಗರಾಜ್ ಬೇದ್ರೇ, ದಗ್ಗೆ ಶಿವಪ್ರಕಾಶ್ ಸಂಪತ್ ಸೇರಿದಂತೆ ಇತರರು ಭಾಗವಹಿಸಿದ್ದರು.

### ರಾಜ್ಯ ಪ್ರತ್ಯೇಕ ಬ್ಯಾಂಕ್ ಖಾತೆ ತೆರೆದರೆ ಭದ್ರಾ ಹಣ ಜಮೆ: ಸಚಿವ ನಾರಾಯಣಸ್ವಾಮಿ ಹೇಳಿಕೆ

» ಮೊದಲ ಪುಟದಿಂದ

ಸಿದ್ದರಾಮಯ್ಯನವರಿಗೆ ಮೋದಿಯವರ ಬಗ್ಗೆ ಹಗುರವನ್ನಾಗಿ ಮಾತನಾಡುವುದನ್ನು ಬಿಡಬೇಕಿದೆ. ದೇಶದ ಯಾವುದೇ ರಾಜ್ಯಕ್ಕೆ ಜಿ.ಎಸ್.ಟಿ. ಬಿಡುಗಡೆ ಮಾಡಿರಬಹುದು ಅಥವಾ ಆರ್ಥಿಕವಾಗಿ ಹಣವನ್ನು ಕೇಂದ್ರ ಸರ್ಕಾರ ಬಿಡುಗಡೆ ಮಾಡಬೇಕೊ ಅದಕ್ಕೆ ಅರ್ಥಿಕ ಇಲಾಖೆ ಇತ್ತೀಚಿನ ದಿನಮಾನದಲ್ಲಿ ಮಾನದಂಡವನ್ನು ರೂಪಿಸಿದೆ. ಅನೇಕ ರಾಜ್ಯಗಳಲ್ಲಿ ಕೇಂದ್ರ ಸರ್ಕಾರ ಬಿಡುಗಡೆ ಮಾಡಿದ ಹಣವನ್ನು ಬೇರೆ ಕಾರ್ಯಕ್ಕೆ ಬಳಕೆ ಮಾಡಲಾಗುತ್ತಿದೆ ಎಂದು ತಿಳಿಸಿದರು.ರಾಜ್ಯ ಸರ್ಕಾರಗಳು ಕೇಂದ್ರ ಸರ್ಕಾರ ನಿರ್ದೇಶನದಂತೆ ಪ್ರತ್ಯೇಕವಾದ ಆಕೌಂಟುಗಳನ್ನು ತೆರೆಯದೆ ಕೇಂದ್ರ ಹಣವನ್ನು ನೀಡಿದ ತಕ್ಷಣವೇ ಅದನ್ನು ಡ್ರಾ ಮಾಡುವ ರಾಜ್ಯ ಸರ್ಕಾರಗಳಿಗೆ ಕೇಂದ್ರ ಸರ್ಕಾರ ನೋಡಿಕೊಂಡು ಇರಲು ಸಾಧ್ಯವಿಲ್ಲ, ಕೇಂದ್ರ ಸರ್ಕಾರ ಭದ್ರ ಮೇಲ್ದಂಡೆಗಾಗಿ ಪ್ರತ್ಯೇಕವಾಗಿ ಎಸ್ಕ್ರೋ ಆಕೌಂಟ್‌ನ್ನು ಮಾಡುವಂತೆ ಕೇಂದ್ರ ಸರ್ಕಾರ ರಾಜ್ಯ ಸರ್ಕಾರಕ್ಕೆ ಹಲವಾರು ಬಾರಿ ಸೂಚನೆಯನ್ನು ನೀಡಿತ್ತು. ಆದರೆ ರಾಜ್ಯ ಸರ್ಕಾರ ಇದುವರೆವಿಗೂ ಎಸ್ಕ್ರೋ ಆಕೌಂಟ್‌ನ್ನು ಮಾಡಿಲ್ಲ, ಇದು ಬಿಟ್ಟು ಕೇಂದ್ರ ಸರ್ಕಾರದ ಮೇಲೆ ಆಪಾದನೆಯನ್ನು ಮಾಡುವುದರಿಂದ ಏನು ಪ್ರಯೋಜ ಇಲ್ಲ. ಅರ್ಥ ಸಚಿವರ ಇಲಾಖೆಯ ಅಧಿಕಾರಿಗಳ ಜೊತೆಯಲ್ಲಿ ಮಾತನಾಡಿ ಸಮಸ್ಯೆಯನ್ನು ಪರಿಹಾರ ಮಾಡಿಕೊಳ್ಳಬೇಕಿದೆ ಎಂದು ತಿಳಿಸಿದರು.ರಾಜ್ಯ ಸರ್ಕಾರ ಈ ಕೂಡಲೇ ಎಸ್ಕ್ರೋ ಅಕೌಂಟ್‌ನ್ನು ಪ್ರಾರಂಭ ಮಾಡಿ ಕಡತವನ್ನು ಕೇಂದ್ರಕ್ಕೆ ಕಳುಹಿಸಿದರೆ ಸಂಬಂಧಪಟ್ಟ ಸಚಿವರ ಜೊತೆಯಲ್ಲಿ ಮಾತನಾಡಿ ಹಣವನ್ನು ಬಿಡುಗಡೆ ಮಾಡುವಲ್ಲಿ ಪ್ರಮಾಣಿಕ ಪ್ರಯತ್ನ ಮಾಡಲಾಗುವುದು. ಅಪ್ಪರ್ ಭದ್ರಾಯೋಜನೆಯಲ್ಲಿ ಸರಿಯಾದ ರೀತಿಯಲ್ಲಿ ಕೆಲಸ ನಡೆಯುತ್ತಿಲ್ಲ. ಈ ಹಿನ್ನಲೆಯಲ್ಲಿ ಕೇಂದ್ರ ಸರ್ಕಾರವೂ ಸಹಾ ಮೊದಲ ಕಂತಿನ ಹಣವನ್ನು ಬಿಡುಗಡೆ ಮಾಡಿ, ತದ ನಂತರ ರಾಜ್ಯ ಸರ್ಕಾರದಿಂದ ಎಸ್ಕ್ರೋ ಆಕೌಂಟನ್ನು ಪ್ರಾರಂಭಿಸುವಂತೆ ಒತ್ತಾಯವನ್ನು ಮಾಡುವಂತೆ ಕೇಂದ್ರ ಸಚಿವರ ಬಳಿ ತಿಳಿಸಿದ್ದೇನೆ ಎಂದರು.ಇದರ ಬಗ್ಗೆ ಬೇಗ ಪ್ರಧಾನ ಮಂತ್ರಿಗಳನ್ನು ಬೇಟಿ ಮಾಡಿ ಆದಷ್ಟು ಬೇಗ ಪ್ರಧಾನ ಮಂತ್ರಿಗಳನ್ನು ಬೇಟಿ ಮಾಡಿ ಭದ್ರಾಕ್ಕೆ ಹಣವನ್ನು ಬಿಡುಗಡೆ ಮಾಡುವ ವ್ಯವಸ್ಥೆಯನ್ನು ಮಾಡಲಾಗುವುದು. 1900 ಕೋಟಿ ಹಣವನ್ನು ರೈಲ್ವೆ ಇಲಾಖೆ ಬಿಡುಗಡೆ ಮಾಡಲಾಗಿದೆ. ಟೆಂಡರ್ ನಡೆಯುತ್ತಿದೆ. ರಾಜ್ಯ ಸರ್ಕಾರ ಕೇಂದ್ರದ ಸೂಚನೆಯನ್ನು ಪಾಲನೆ ಮಾಡಬೇಕಿದೆ. ಹಣವನ್ನು ಕೇಳಬೇಕಿದೆ ಎಂದು ತಿಳಿಸಿದರು. ವಿಧಾನ ಪರಿಷತ್ ಸದಸ್ಯ ಕೆ.ಎಸ್.ನವೀನ್, ಆಯೋಧ್ಯಯ ಶ್ರೀರಾಮ ದರ್ಶನ ಅಭಿಯಾನದ ಸಂಚಾಲಕ ಜಗದೀಶ್ ಹಿರೇಮನಿ, ಬಿಜೆಪಿ ಮುಖಂಡರಾದ ಅನಿತ್‌ಕುಮಾರ್ ಉಪಸ್ಥಿತರಿದ್ದರು.

### ಶ್ರೀಭಕ್ತಮಾರ್ಕಂಡೇಶ್ವರ ಸ್ವಾಮಿ ಜಯಂತಿ: ಸಚಿವ ಡಿ.ಸುಧಾಕರ್ ಚಾಲನೆ.

» ಚಳ್ಳಕೆರೆ

ಇಲ್ಲಿನ ಮದಕರಿನಗರದಲ್ಲಿರುವ ನವೀಕೃತಗೊಂಡ ಪದ್ಮಶಾಲಿ ಕಲ್ಯಾಣ ಮಂಟಪದಲ್ಲಿ ಫೆ.12ರ ಸೋಮವಾರ ಶ್ರೀಭಕ್ತ ಮಾರ್ಕಂಡೇಶ್ವರಸ್ವಾಮಿ ಅದ್ದೂರಿಯಾಗಿ ಆಚರಿಸಲಾಗುವುದು ಎಂದು ಪದ್ಮಶಾಲಿ ಸಮಾಜ ಸೇವಾ ಸಂಘದ ತಾಲ್ಲೂಕು ಅಧ್ಯಕ್ಷ ಪೆನಗೊಂಡ್ಲ ಎಚ್.ರವಿ ತಿಳಿಸಿದ್ದಾರೆ. ಅವರು, ಈ ಬಗ್ಗೆ ಮಾಹಿತಿ ನೀಡಿ, ತಾಲ್ಲೂಕಿನ ಸಮಸ್ತ ಪದ್ಮಶಾಲಿ ಸಮಾಜದ ಬಂಧುಗಳು, ಪದ್ಮಶಾಲಿ ಸಮಾಜಸೇವಾ ಸಂಘ, ಯುವಕ ಸಂಘ ಹಾಗೂ ಮಹಿಳಾ ಸ್ವಯಂಸೇವಾ ಸಂಘದ ಆಶ್ರಯದಲ್ಲಿ ಈ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

### ಬೀಳ್ಕೋಡುಗೆ ಸಮಾರಂಭದಲ್ಲಿ ಡಿಸಿ ದಿವ್ಯಪ್ರಭು ಜಿ.ಆರ್.ಜೆ

# ಚಿತ್ರದುರ್ಗ ಜನತೆ ನೀಡಿದ ಬೀಳ್ಕೊಡುಗೆ ಜೀವನದಲ್ಲಿ ಮರೆಯಲಾಗದ ಮಧುರ ಕ್ಷಣ

» ಚಿತ್ರದುರ್ಗ

ರಾಜ್ಯದಲ್ಲಿ ಕಳೆದ 12 ವರ್ಷಗಳಿಂದ ವಿವಿಧ ಹುದ್ದೆಗಳಲ್ಲಿ ಕೆಲಸ ಮಾಡಲಾಗಿದ್ದು, ವರ್ಗಾವಣೆಯಾದ ಸಂದರ್ಭದಲ್ಲಿ ಬಿಳ್ಕೋಡುಗೆ ನಡೆಯುತ್ತದೆ. ಆದರೆ ಚಿತ್ರದುರ್ಗದ ಜನರು ನೀಡಿದ ಬೀಳ್ಕೊಡುಗೆ ಸಮಾರಂಭ ನನ್ನ ಜೀವನದಲ್ಲಿ ಮರೆಯಲಾಗದ ಮಧುರ ಕ್ಷಣ ಎಂದು ಚಿತ್ರದುರ್ಗ ಜಿಲ್ಲಾಧಿಕಾರಿಯಾಗಿ ಸೇವೆ ಸಲ್ಲಿಸಿಧಾರವಾಡಕ್ಕೆವರ್ಗಾವಣೆಯಾಗಿರುವ ದಿವ್ಯಪ್ರಭು ಜಿ.ಆರ್.ಜೆ ಸಂತಸ ವ್ಯಕ್ತಪಡಿಸಿದರು.

ನಗರದ ತ.ರಾ.ಸು ರಂಗಮಂದಿರದಲ್ಲಿ ಶುಕ್ರವಾರ ಸಂಜೆ ಹಮ್ಮಿಕೊಂಡಿದ್ದ ಬೀಳ್ಕೊಡುಗೆ ಸಮಾಂಭದಲ್ಲಿ ಬೀಳ್ಕೊಡುಗೆ ಸ್ವೀಕರಿಸಿ ಮಾತನಾಡಿದ ಅವರು, ವರ್ಗಾವಣೆಯಾಗುವುದು ಸಹಜ. ಒಂದು ಜಿಲ್ಲೆಯಿಂದ ಮತ್ತೊಂದು ಜಿಲ್ಲೆಗೆ ವರ್ಗಾವಣೆಯಾದಾಗ ಅಧಿಕಾರಿಗಳು, ಸಿಬ್ಬಂದಿಗಳು ಸೇರಿ ಆಸಕ್ತಿವಹಿಸಿ ಬೀಳ್ಕೊಡುಗೆ ನೀಡುವುದನ್ನು ನೋಡಿದ್ದೇನೆ. ಆದರೆ ಚಿತ್ರದುರ್ಗ ಜಿಲ್ಲೆಯಿಂದ ವರ್ಗಾವಣೆಯಾದ ನಂತರವೂ ಸಹ ವಿವಿಧ ಸಂಘ–ಸಂಸ್ಥೆಗಳು, ವಿದ್ಯಾರ್ಥಿಗಳು ಸೇರಿದಂತೆ ಚಿತ್ರದುರ್ಗ ಜಿಲ್ಲೆಯ ಜನರೆಲ್ಲರೂ ಸೇರಿ ನನಗೆ ಇಂತಹ ಅಭೂತ ಪೂರ್ವವಾದ ಬೀಳ್ಕೊಡುಗೆ ನೀಡಿರುವುದನ್ನು ಎಂದಿಗೂ ಮರೆಯುವುದಿಲ್ಲ ಎಂದು ತಿಳಿಸಿದ ಅವರು, ಇಲ್ಲಿಯವರೆಗೂ ನನ್ನ ತವರು ಮನೆ ತಮಿಳುನಾಡು ಎಂದು ಹೇಳುತ್ತಿದ್ದೆ. ಇನ್ನೂ ಮುಂದೆ ಚಿತ್ರದುರ್ಗ ನನ್ನ ತವರು ಮನೆ ಎಂದು ಹೆಮ್ಮೆಯಿಂದ ಹೇಳಿಕೊಳ್ಳುತ್ತೇನೆ. ಅಷ್ಟೊಂದು ಪ್ರೀತಿ, ವಿಶ್ವಾಸವನ್ನು ತಮ್ಮ ಅಭಿಮಾನ ವ್ಯಕ್ತಪಡಿಸಿರುವುದನ್ನು ಎಂದಿಗೂ ಮರೆಯಲು ಸಾಧ್ಯವಿಲ್ಲ ಎಂದು ಅನಿಸಿಕೆ ವ್ಯಕ್ತಪಡಿಸಿದರು.





ಅಧಿಕಾರವಿದ್ದಾಗ ತಮ್ಮ ಕರ್ತವ್ಯವನ್ನು ನಿಷ್ಠೆ ಮತ್ತು ತುಂಬಾ ಕಾಳಜಿಯಿಂದ ಜನ ಸೇವೆ ಮಾಡಿದಾಗ ಎಲ್ಲರ ಮನದಲ್ಲಿ ಶಾಶ್ವತವಾಗಿ ಉಳಿಯಬಹುದು. ಹುಟ್ಟು–ಸಾವಿನ ನಡುವೆ ಸಾರ್ವಜನಿಕವಾಗಿ ಏನು ಮಾಡಿದ್ದೇವೆ ಎನ್ನುವುದು ಮುಖ್ಯ. ನಮ್ಮ ಬದುಕಿನಲ್ಲಿ ನಾವು ಏನನ್ನೂ ತೆಗೆದುಕೊಂಡು ಹೋಗುವುದಿಲ್ಲ. ನಾವು ಮಾಡಿದ ಕೆಲವು ವಿಷಯಗಳು ಮಾತ್ರ ಇರುತ್ತವೆ ಎಂದು ತಿಳಿಸಿದರು.

ಒಳ್ಳೆ ಕೆಲಸ ಮಾಡಿದಾಗ ಯಾವುದೋ ಒಂದು ರೂಪದಲ್ಲಿ ಖಂಡಿತವಾಗಿಯೂ ಫಲ ಸಿಕ್ಕೇ ಸಿಗುತ್ತದೆ. ಅಧಿಕಾರಿಗಳಾದವರಿಗೆ ಜನಸೇವೆ ಮಾಡುವ ಮನೋಭಾವ ಹೊಂದಿರಬೇಕು. ಒಂದು ಜಿಲ್ಲೆಯ ಜಿಲ್ಲಾಧಿಕಾರಿಯಾಗಿ ಕೆಲಸ ಮಾಡಿದಾಗ ಬಡವರ, ಜನ ಸಾಮಾನ್ಯರ ಸಮಸ್ಯೆಗಳಿಗೆ ಹತ್ತಿರವಿದ್ದು, ಕೈಲಾದಷ್ಟು ಒಳ್ಳೆಯದು ಮಾಡಬಹುದು. ಹಾಗಾಗಿ ರಾಜ್ಯದಲ್ಲಿ ನಾನು ಎಲ್ಲಿಯೇ ಅಧಿಕಾರದಲ್ಲಿರಲಿ ಚಿತ್ರದುರ್ಗಕ್ಕೆ ನನ್ನಿಂದ ಏನಾದರೂ ಒಳ್ಳೇದು ಮಾಡುವ ಸಂದರ್ಭ ಸಿಕ್ಕಾಗ ಖಂಡಿತ ಮಾಡುತ್ತೇನೆ ಭರವಸೆ ನೀಡಿದ ಅವರು, ಜಿಲ್ಲೆಯ ಜನರಿಗೆ ಅಭಾರಿಯಾಗಿರುತ್ತೇನೆ ಎಂದು ಹೇಳಿದರು.

ನೂತನ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸನ್ಮಾನ ಸ್ವೀಕರಿಸಿ ಮಾತನಾಡಿ, 15 ವರ್ಷಗಳ ಹಿಂದೆ ಚಿತ್ರದುರ್ಗದಲ್ಲಿ ಉಪವಿಭಾಗಾಧಿಕಾರಿಯಾಗಿ ಕೆಲಸ ಮಾಡಿದ್ದೇನೆ. ಇದೀಗ ಜಿಲ್ಲಾಧಿಕಾರಿಯಾಗಿ ಚಿತ್ರದುರ್ಗಕ್ಕೆ ಸರ್ಕಾರ ವರ್ಗಾಯಿಸಿ ಎರಡನೇ ಬಾರಿಗೆ ಇಲ್ಲಿ ಸೇವೆ ಸಲ್ಲಿಸುವ ಅವಕಾಶ ಮಾಡಿಕೊಟ್ಟಿದೆ ಎಂದು ತಿಳಿಸಿದ ಅವರು, ದಿವ್ಯಪ್ರಭು ಜಿ.ಆರ್.ಜೆ ಅವರು ಚಿತ್ರದುರ್ಗ ಜಿಲ್ಲಾಧಿಕಾರಿಯಾಗಿ ಉತ್ತಮ ಸೇವೆ ಸಲ್ಲಿಸುವ ಮೂಲಕ ಎಲ್ಲರ ಅಭಿಮಾನ, ಮೆಚ್ಚುಗೆ ಗಳಿಸಿದ್ದಾರೆ ಎಂದು ಹರ್ಷ ವ್ಯಕ್ತಪಡಿಸಿದರು.

ಶಾಸಕ ಕೆ.ಸಿ.ವೀರೇಂದ್ರಪಪ್ಪಿ ಮಾತನಾಡಿ, ಸರ್ಕಾರದ ಕೆಲಸ ದೇವರ ಕೆಲಸ ಎಂದು ತಿಳಿದು ಚಾಚೂ ತಪ್ಪದೇ ಪಾಲಿಸಿಕೊಂಡು ಬಂದ ದಿವ್ಯಪ್ರಭು ಜಿ.ಆರ್.ಜೆ. ಅವರು ಚಿತ್ರದುರ್ಗ ಜಿಲ್ಲಾಧಿಕಾರಿಯಾಗಿ ಸೇವೆ ಸಲ್ಲಿಸಿ, ಧಾರವಾಡ ಜಿಲ್ಲಾಧಿಕಾರಿಯಾಗಿ ವರ್ಗಾವಣೆಗೊಂಡಿದ್ದಾರೆ. ಕವಾಡಿಗರಹಟ್ಟಿ ಪ್ರಕರಣದಲ್ಲಿ ಸಮರ್ಥವಾಗಿ ಕರ್ತವ್ಯ ನಿಭಾಯಿಸಿದರು. ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಚಿತ್ರದುರ್ಗ ಜಿಲ್ಲೆಯು ರಾಜ್ಯದಲ್ಲಿಯೇ ಮೊದಲ ಸ್ಥಾನ ಅಲಂಕರಿಸಲು ಕಾರಣರಾಗಿದ್ದಾರೆ. ಜೊತೆಗೆ ರಾಷ್ಟ್ರಪತಿಗಳಿಂದ ರಾಷ್ಟ್ರಮಟ್ಟದ ಎರಡು ಪ್ರಶಸ್ತಿಗಳಿಗೆ ಭಾಜನರಾಗಿದ್ದಾರೆ. ಮುಂದೆಯೂ ಜನಸೇವೆ ಮಾಡಿ ಉತ್ತಮ ಹೆಸರು ಗಳಿಸಲಿ ಎಂದು ಶುಭ ಹಾರೈಸಿದರು.

ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆ ಆಯುಕ್ತೆ ವಿ.ವಿ. ಜೋತ್ಸ್ನಾ ಮಾತನಾಡಿ, ಐದು ವರ್ಷಗಳ ಹಿಂದೆ ನಾನು ಕೂಡ ಚಿತ್ರದುರ್ಗದಲ್ಲಿ ಜಿಲ್ಲಾಧಿಕಾರಿಯಾಗಿ ಕೆಲಸ ಮಾಡಿದ್ದೇನೆ. ಈಗಲೂ ಜಿಲ್ಲೆಯ ಜನ ನನ್ನ ಮೇಲಿಟ್ಟಿರುವ ಅಭಿಮಾನ ಪ್ರೀತಿ ಮರೆಯುವುದಿಲ್ಲ. ಇಲ್ಲಿ ಕೆಲಸ ಮಾಡುವಾಗ ಎಲ್ಲರ ಸಹಕಾರ ಸಿಕ್ಕಿದೆ ಎಂದು ತಿಳಿಸಿದ ಅವರು, ದಿವ್ಯಪ್ರಭು ಜಿ.ಆರ್.ಜೆ ಅವರು ನೋಡಲು ಮೃದುವಾಗಿರಬಹುದು. ಆದರೆ ಅವರು ಕೆಲವೊಮ್ಮೆ ತೆಗೆದುಕೊಳ್ಳುವ ನಿರ್ಧಾರಗಳು ಕಠಿಣ ದಿಟ್ಟವಾಗಿರುತ್ತಿದ್ದವು ಎಂದು ತಿಳಿಸಿದರು.

ಮಾಜಿ ಸಚಿವ ಹೆಚ್.ಆಂಜನೇಯ, ಮಾಜಿ ಸಂಸದ ಬಿ.ಎನ್.ಚಂದ್ರಪ್ಪ ಮಾತನಾಡಿದರು.

ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಉಪವಿಭಾಗಾಧಿಕಾರಿ ಎಂ.ಕಾರ್ತಿಕ್, ತಹಶೀಲ್ದಾರ್ ಡಾ.ನಾಗವೇಣಿ, ನಗರಸಭೆ ಪೌರಾಯುಕ್ತೆ ಎಂ.ರೇಣುಕಾ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಕೆ.ರವಿಶಂಕರ್‌ರೆಡ್ಡಿ, ಮರ್ಚೆಂಟ್ಸ್ ಸೌಹಾರ್ದ ಸಹಕಾರ ಬ್ಯಾಂಕ್ ಅಧ್ಯಕ್ಷ ಎಸ್.ಆರ್.ಲಕ್ಷ್ಮಿಕಾಂತರೆಡ್ಡಿ, ಮುಖಂಡರಾದ ಬಿ.ಎ.ಲಿಂಗಾರೆಡ್ಡಿ, ಎಂ.ಕೆ.ತಾಜ್‌ಪೀರ್ ಸೇರಿದಂತೆ ಇತರರು ಇದ್ದರು.

# ಮದಕರಿನಾಯಕ ಪ್ರಶಸ್ತಿಗೆ ಭಾಜನರಾಗಿರುವ ಡಾ.ಬಿ.ಎಲ್.ವೇಣುಗೆ ಜನಾರ್ಧನಸ್ವಾಮಿ ಸನ್ಮಾನ

» ಚಿತ್ರದುರ್ಗ

ಜನಪ್ರತಿನಿಧಿಗಳಾದವರಿಗೆ ಕ್ಷೇತ್ರದ ಅಭಿವೃದ್ಧಿ ಬಗ್ಗೆ ಕಾಳಜಿ, ಕಳಕಳಿಯಿರಬೇಕೆಂದು ಮಾಜಿ ಸಂಸದ ಜನಾರ್ಧನಸ್ವಾಮಿ ಹೇಳಿದರು.

ಪ್ರಾದೇಶಿಕ ಭಾಷಾ ಗುಣಾತ್ಮಕ ಚಲನಚಿತ್ರಗಳ ಆಯ್ಕೆ ಸಮಿತಿಗೆ ಅಧ್ಯಕ್ಷರಾಗಿ ಆಯ್ಕೆಯಾಗಿ ರಾಜನಹಳ್ಳಿ ವಾಲ್ಮೀಕಿ ಗುರುಪೀಠದ ಪ್ರತಿಷ್ಠಿತ ರಾಜಾವೀರ ಮದಕರಿನಾಯಕ ಪ್ರಶಸ್ತಿಗೆ ಭಾಜನರಾಗಿರುವ ಸಾಹಿತಿ ಡಾ.ಬಿ.ಎಲ್. ವೇಣುರವರನ್ನು ಚಿತ್ರದುರ್ಗದ ಅವರ ನಿವಾಸದಲ್ಲಿ ಗುರುವಾರ ಸನ್ಮಾನಿಸಿ ಮಾತನಾಡಿದರು.



2009 ರಲ್ಲಿ ನಾನು ಸಂಸದನಾದಾಗ ನಮ್ಮ ಪಕ್ಷ ಅಧಿಕಾರದಲ್ಲಿರಲಿಲ್ಲ. ವಿರೋಧ ಪಕ್ಷದಲ್ಲಿದ್ದುಕೊಂಡು ಸಾವಿರಾರು ಕೋಟಿ ರೂ.ಗಳ ಅನುದಾನ ತಂದಿದ್ದೇನೆ. ಮಧ್ಯ ಕರ್ನಾಟಕದ ಬಯಲುಸೀಮೆ ಚಿತ್ರದುರ್ಗಕ್ಕೆ ಹಿಂದುಳಿದ ಪ್ರದೇಶ ಎಂಬ ಹಣೆಪಟ್ಟಿ ಅಂಟಿಕೊಂಡಿರುವುದನ್ನು ಅಳಿಸಿ ಹಾಕಬೇಕಾಗಿದೆ. ನೇರ ರೈಲು ಮಾರ್ಗ ಬೇಕು. ಏಳುಸುತ್ತಿನ ಚಿತ್ರದುರ್ಗದ ಕೋಟೆ ಹಾಳಾಗದಂತೆ ಸ್ಮಾರಕವನ್ನಾಗಿ ಸಂರಕ್ಷಿಸಬೇಕಿದೆ. ಮುಖ್ಯವಾಗಿ ನೀರು, ಕೈಗಾರಿಕೆ ಇಲ್ಲದಿರುವುದು ಚಿತ್ರದುರ್ಗ ಜಿಲ್ಲೆ ಹಿಂದುಳಿಯಲು ಕಾರಣ. ನಮ್ಮ ಜಿಲ್ಲೆಯಲ್ಲೆ ಇದ್ದ ದಾವಣಗೆರೆ ಎಷ್ಟೊಂದು ಮುಂದುವರೆದಿದೆ. ಶಿವಮೊಗ್ಗ, ಬಳ್ಳಾರಿ, ತುಮಕೂರು ಈ ಜಿಲ್ಲೆಗಳನ್ನು ಯಾರು ಹಿಂದುಳಿದ ಜಿಲ್ಲೆ ಎಂದು ಕರೆಯುತ್ತಿಲ್ಲ. ಹಾಗಾಗಿ ಇಲ್ಲಿನ ಜನಪ್ರತಿನಿಧಿಗಳು ಜಿಲ್ಲೆಗೆ ಅಗತ್ಯವಾಗಿರುವ ಮೂಲಭೂತ ಸೌಲಭ್ಯಗಳನ್ನು ಒದಗಿಸುವ ಕಡೆ ಗಮನ ಕೊಡಬೇಕಿದೆ ಎಂದರು.

ಚಳ್ಳಕೆರೆ ಸಮೀಪ ಡಿ.ಆರ್.ಡಿ.ಓ. ಆಗಿದೆ. ಎಷ್ಟೋ ಮಂದಿಗೆ ಇನ್ನು ಇದರ ವಿಶೇಷತೆ ಗೊತ್ತಿಲ್ಲ. ಗುಣಮಟ್ಟದ ಶಿಕ್ಷಣಕ್ಕೆ ಜಿಲ್ಲೆಯಲ್ಲಿ ಎಲ್ಲರೂ ಒತ್ತು ಕೊಡಬೇಕು ಎಂದು ತಿಳಿಸಿದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಸಾಹಿತಿ ಡಾ.ಬಿ.ಎಲ್.ವೇಣು ಚಿತ್ರದುರ್ಗ ಐತಿಹಾಸಿಕವಾಗಿ ಪ್ರಸಿದ್ದಿ ಪಡೆದಿದೆ ಎನ್ನುವುದನ್ನು ಬಿಟ್ಟರೆ ಬೇರೆ ಯಾವ ದೃಷ್ಠಿಯಲ್ಲೂ ಅಭಿವೃದ್ದಿಯಾಗಿಲ್ಲ. ಭದ್ರಾಮೇಲ್ದಂಡೆ ಯೋಜನೆಗಾಗಿ ಕಳೆದ ಮೂವತ್ತು ನಲವತ್ತು ವರ್ಷಗಳಿಂದಲೂ ಹೋರಾಟ ನಡೆಯುತ್ತಿದ್ದರೂ ಕಾಮಗಾರಿ ಮಾತ್ರ ಇನ್ನು ಪೂರ್ಣಗೊಂಡಿಲ್ಲ. ಪರಿಸ್ಥಿತಿ ಹೀಗೆ ಮುಂದುವರೆದರೆ ಜಿಲ್ಲೆಗೆ ನೀರು ಹರಿಯುತ್ತದೆ ಎನ್ನುವುದು ಯಾವ ಗ್ಯಾರೆಂಟಿ. ಚುನಾಯಿತ ಪ್ರತಿನಿಧಿಗಳಿಗೆ ಇಚ್ಚಾಶಕ್ತಿಯಿರಬೇಕು ಎಂದು ನುಡಿದರು.

## ಸಮಾಜಕ್ಕೆ ಕಳಂಕಪ್ರಾಯವಾಗಿರುವ ಜೀತಪದ್ಧತಿ ನಿರ್ಮೂಲನೆಗೆ ಎಲ್ಲರೂ ಕೈಜೋಡಿಸಿ: ತಹಶೀಲ್ದಾರ್ ಪಾಷ



» ಚಳ್ಳಕೆರೆ

ಪೂರ್ವಕಾಲದಿಂದಲೂ ನಮ್ಮ ಪೂರ್ವಜರು ಮನೆಯಲ್ಲಿಯೇ ಖಾಸಗಿ ಕೆಲಸ ಕಾರ್ಯಗಳಿಗೂ ಆಳುಗಳನ್ನು ನೇಮಿಸಿ ಅವರು ದಿನದ 24 ಗಂಟೆಗಳ ಕಾಲ ಮನೆಯಲ್ಲೇ ಇದ್ದು ಹೇಳಿದ ಕೆಲಸ ಮಾಡಬೇಕಿತ್ತು. ಅವರಿಗೆ ವರ್ಷಕ್ಕೆ ಇಂತಿಷ್ಟು ಹಣವನ್ನು ನೀಡಿ ಅವರನ್ನು ಜೀತದಾಳುಗಳಾಗಿ ಕಾಣುತ್ತಿದ್ದು, ಇದು ಸಮಾಜಕ್ಕೆ ಕಳಂಕಪ್ರಾಯವಾಗಿತ್ತು ಎಂದು ತಹಶೀಲ್ದಾರ್ ರೇಹಾನ್ ಪಾಷ ತಿಳಿಸಿದರು.

ಅವರು, ಶುಕ್ರವಾರ ತಾಲ್ಲೂಕು ಕಚೇರಿ ಮುಂಭಾಗದಲ್ಲಿ ಕಾರ್ಮಿಕ ಇಲಾಖೆ ಹಮ್ಮಿಕೊಂಡಿದ್ದ ಜೀತಪದ್ದತಿ ರದ್ದತಿ ದಿನಾಚರಣೆ ಜಾಗೃತಿ ಜಾಥವನ್ನು ಹಸಿರು ನಿಶಾನೆ ತೋರಿಸುವ ಮೂಲಕ ಚಾಲನೆ ನೀಡಿ ಮಾತನಾಡಿದರು. ಸರ್ಕಾರ ಅನಿಷ್ಠ ಪದ್ದತಿಯನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡುವ ದೃಷ್ಠಿಯಿಂದ ಇಂತಹ ಜಾಗೃತಿ ಕಾರ್ಯಕ್ರಮಗಳ ಮೂಲಕ ಅರಿವು ಮೂಡಿಸುತ್ತಿದೆ. ಇದಕ್ಕೆ ಎಲ್ಲರೂ ಸಹಕರಿಸಬೇಕೆಂದರು.

## ಪ್ರಮುಖ ಸುದ್ದಿ

### ತರಬೇತಿ ಕಾರ್ಯಾಗಾರದಲ್ಲಿ ಆರ್‌ಸಿಹೆಚ್ ಅಧಿಕಾರಿ ಡಾ.ಅಭಿನವ್

# ಪಲ್ಸ್ ಪೋಲಿಯೋ ಯಶಸ್ವಿಗೊಳಿಸೋಣ

» ಚಿತ್ರದುರ್ಗ

ಎಲ್ಲರೂ ಒಟ್ಟಾಗಿ ಸೇರಿ ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮ–2024ಅನ್ನು ಯಶಸ್ವಿಗೊಳಿಸೋಣ ಎಂದು ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಅಭಿನವ್ ಹೇಳಿದರು.

ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಸಭಾಂಗಣದಲ್ಲಿ ಶುಕ್ರವಾರ ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮದ ಅಂಗವಾಗಿ ಜಿಲ್ಲೆಯ ಎಲ್ಲಾ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಮೇಲ್ವಿಚಾರಕರಿಗೆ ಹಮ್ಮಿಕೊಂಡಿದ್ದ ತರಬೇತಿ ಕಾರ್ಯಗಾರದಲ್ಲಿ ಅವರು ಮಾತನಾಡಿದರು.



0–5 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ 2 ಹನಿ ಪೋಲಿಯೋ ಲಸಿಕೆ ಹಾಕಿಸಿ ಪೋಲಿಯೋ ರೋಗದ ಮೇಲೆ ವಿಜಯ ಸಾಧಿಸಿ ಪೋಲಿಯೋ ಮುಕ್ತಭಾರತವೆಂದು 2014ರಲ್ಲೇ ಘೋಷಣೆಯಾಗಿದ್ದರೂ ಅಕ್ಕ ಪಕ್ಕದ ರಾಷ್ಟ್ರಗಳಾದ ಪಾಕಿಸ್ತಾನ, ಆಫ್ಘಾನಿಸ್ತಾನಗಳಲ್ಲಿ ಪ್ರಚಲಿತ ಪೋಲಿಯೋ ಪ್ರಕರಣಗಳು ಇರುವುದರಿಂದ ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಅಭಿಯಾನ ಮತ್ತೆ ಪೋಲಿಯೋ ಮರುಕಳಿಸದಂತೆ ಮುನ್ನೆಚ್ಚರಿಕೆಯ ಲಸಿಕಾ ಅಭಿಯಾನವಾಗಿದೆ ಎಂದು ಹೇಳಿದರು. ದೈನಂದಿನ ಲಸಿಕಾ ಕಾರ್ಯಕ್ರಮದಲ್ಲಿ ಪೋಲಿಯೋ ಲಸಿಕೆಯನ್ನು ಮಕ್ಕಳಿಗೆ ನೀಡಲಾಗುತ್ತಿದೆ. ರಕ್ಷಣಾ ವ್ಯವಸ್ಥೆ ಬಲಪಡಿಸಲು ಇನ್ನು ಕೆಲವು ವರ್ಷ ರಾಷ್ಟ್ರೀಯ ಪಲ್ಸ್ ಪೋಲಿಯೋ ದಿನವನ್ನು ದೇಶಾದಾದ್ಯಂತ ಸರ್ಕಾರದ ಮಾರ್ಗಸೂಚಿಯಂತೆ ನಡೆಸಲಾಗುತ್ತಿದೆ ಎಂದು ತಿಳಿಸಿದರು. 2022ರ ಫೆಬ್ರುವರಿ ತಿಂಗಳಲ್ಲಿ ನಡೆದ ಪಲ್ಸ್ ಪೋಲಿಯೋ ಕಾರ್ಯಕ್ರಮದಲ್ಲಿ ಜಿಲ್ಲೆಯಲ್ಲಿ 150054 ಮಕ್ಕಳನ್ನು ಗುರುತಿಸಿ, 1091 ನಿಗಧಿತ ಬೂತ್, 71 ಪ್ರಯಾಣಿಕರು ಸಂಚರಿಸುವ ಸ್ಥಳಗಳ ಬೂತ್, 16 ಸಂಚಾರಿ ಬೂತ್‌ಗಳ ಸ್ಥಾಪನೆ ಮಾಡಿದ್ದು, 2355 ವ್ಯಾಕ್ಸಿನೇಟರ್ಸ್, 254 ಜನ ಮೇಲ್ವಿಚಾರಕರಣ ತಂಡಗಳು ಕ್ರಿಯಾಯೋಜನೆಯಂತೆ ಕಾರ್ಯನಿರ್ವಹಿಸಿ, ಯಶಸ್ವಿ ಸಾಧನೆ ಮಾಡಲಾಗಿತ್ತು. ಅದರಂತೆ 2024ರ ಕಾರ್ಯಕ್ರಮದಲ್ಲಿ ಎಲ್ಲಾ ಪ್ರಾಥಮಿಕ ಆರೋಗ್ಯಕೇಂದ್ರಗಳುಕ್ರಿಯಾಯೋಜನೆಯ ತಯಾರಿಸಿ ತಾಲ್ಲೂಕು ಮಟ್ಟದಿಂದ ಜಿಲ್ಲಾ ಮಟ್ಟಕ್ಕೆ ಕಳಿಸಿಕೊಡಬೇಕು. ಎಲ್ಲಾ ಸೂಕ್ಷ್ಮ, ಅತಿ ಸೂಕ್ಷ್ಮ ಪ್ರದೇಶಗಳನ್ನು ಗುರುತಿಸಿ ಸೇವೆ ಒದಗಿಸಬೇಕು.

ಯಾವುದೇ ಮಕ್ಕಳು ಲಸಿಕೆಯಿಂದ ವಂಚಿತರಾಗಬಾರದು ಎಂದು ಸಲಹೆ ನೀಡಿದರು.ಇದೇ ಸಂದರ್ಭದಲ್ಲಿ ಕ್ರಿಯಾಯೋಜನೆಯಲ್ಲಿ ಬಳಕೆ ಆಗುವ ನಮೂನೆ ತುಂಬುವ ವಿಧಾನವನ್ನು ಪ್ರಾತ್ಯಕ್ಷಿಕೆ ನೀಡಿದರು. ಆರೋಗ್ಯ ಶಿಕ್ಷಣಾಧಿಕಾರಿಗಳಾದ ಎನ್.ಎಸ್. ಮಂಜುನಾಥ್, ಬಿ.ಮೂಗಪ್ಪ, ಎಂ.ಎಚ್.ಚಂದ್ರಶೇಖರ್ ನಾಯಕ್, ಲಲಿತಮ್ಮ, ತಿಪ್ಪೇಸ್ವಾಮಿ, ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಗಂಗಾಧರೆಡ್ಡಿ, ಶ್ರೀಧರ್, ಗುರುಮೂರ್ತಿ, ಶಾಂತಮ್ಮ, ಜಿಲ್ಲಾ ವ್ಯವಸ್ಥಾಪಕರಾದ ಪ್ರಪುಲ್ಲ, ದಸ್ತಗೀರ್ ಸಾಬ್ ಇದ್ದರು.

## ಫಾಸ್ಟ್ ನ್ಯೂಸ್

### ಶಿಕ್ಷಣಕ್ಕೆ ನಮ್ಮ ಸರ್ಕಾರ ಹೆಚ್ಚು ಆದ್ಯತೆ ನೀಡುತ್ತಿದೆ: ಬಸವರಾಜು ಶಿವಗಂಗಾ

» **ಚನ್ನಗಿರಿ**

ಪ್ರತಿಯೊಬ್ಬರಿಗೂ ಉತ್ತಮ ಶಿಕ್ಷಣ ಸಿಗಬೇಕು, ಈ ನಿಟ್ಟಿನಲ್ಲಿ ನಮ್ಮ ಸರ್ಕಾರ ಶಿಕ್ಷಣದ ಅಭಿವೃದ್ಧಿಗೆ ಹೆಚ್ಚು ಮಹತ್ವ ನೀಡುತ್ತಿದೆ ಎಂದು ಶಾಸಕರಾದ ಬಸವರಾಜು ವಿ ಶಿವ ಗಂಗಾ ತಿಳಿಸಿದರು. ಸಂತೇಬೆನ್ನೂರು ಗ್ರಾಮದ ಮೌಲಾನ ಆಜಾದ್ ಆಂಗ್ಲ ಮಾಧ್ಯಮ ಮಾದರಿ ಶಾಲೆಯಲ್ಲಿ ಅಲ್ಪ ಸಂಖ್ಯಾತರ ನಿರ್ದೇಶನಲಯ ಬೆಂಗಳೂರು, ಜಿಲ್ಲಾ ಪಂಚಾಯತ್ ದಾವಣಗೆರೆ .ಇವರ ಸಹಯೋಗದೊಂದಿಗೆ ನಡೆಸಲಾಗುತ್ತಿರುವ ಆಜಾದ್ ಶಾಲಾ ಶಿಕ್ಷಣೋತ್ಸವ 2024 ಹಾಗೂ ವಾರ್ಷಿಕೋತ್ಸವ ಸಮಾರಂಭದಲ್ಲಿ ಭಾಗವಹಿಸಿ ಈ ವಿಷಯ ತಿಳಿಸಿದರು. ಮಕ್ಕಳಿಗೆ ಉತ್ತಮ ಗುಣಮಟ್ಟದ ಶಿಕ್ಷಣ ಜೊತೆಗೆ, ಸಂಸ್ಕೃತಿ, ಸಂಸ್ಕಾರ ಬಗ್ಗೆಯೂ ತಿಳಿಸಿಕೊಡುವ ಮೂಲಕ ಸಾಮಾಜಿಕ ಜವಾಬ್ದಾರಿಯನ್ನೂ ಕಳಿಸಿಕೊಡಬೇಕೆಂದರು. ಶಾಲೆ ಒಂದು ದೇವಾಲಯವಿದ್ದಂತೆ ಮಕ್ಕಳಿಗೆ ವಿದ್ಯಾದಾನ ಮಾಡುವ ಒಂದು ಸ್ಥಳ ನಾವು ನೀವು ಅದನ್ನ ಕಾಪಾಡಿಕೊಂಡು ಹೋಗಬೇಕಿದೆ ಎಂದರು. ಈ ವೇಳೆ ಶಾಲಾ ಬೋಧಕ ವರ್ಗ, ಪೋಷಕರು ಗ್ರಾಮದ ಮುಖಂಡರು ಉಪಸ್ಥಿತರಿದ್ದರು.

### ಕೈಗಾರಿಕೆಗಳ ಮಂಡಳಿ ನೂತನ ಅಧ್ಯಕ್ಷರಾಗಿ ಶಾಸಕ ಟಿ.ರಘುಮೂರ್ತಿ ಇಂದು ಪದಗ್ರಹಣ

» **ಚಳ್ಳಕೆರೆ**

ಚಳ್ಳಕೆರೆ ವಿಧಾನಸಭಾ ಕ್ಷೇತ್ರದ ಹ್ಯಾಟ್ರಿಕ್ ಖ್ಯಾತಿಯ



ಶಾಸಕ ಟಿ.ರಘುಮೂರ್ತಿ ಕರ್ನಾಟಕ ರಾಜ್ಯ ಕೈಗಾರಿಕೆಗಳ ಮಂಡಳಿಯ ಅಧ್ಯಕ್ಷರಾಗಿ ಜ.26ರಂದು ಸರ್ಕಾರದಿಂದ ನೇಮಕಗೊಂಡಿದ್ದು, ಫೆ.12ರ ಸೋಮವಾರ ಬೆಳಗ್ಗೆ 11 ಗಂಟೆಗೆ ಬೆಂಗಳೂರಿನಲ್ಲಿರುವ ಕರ್ನಾಟಕ ರಾಜ್ಯ ಕೈಗಾರಿಕ ಮಂಡಳಿಯ ಮುಖ್ಯ ಕಚೇರಿಯಲ್ಲಿ ನೂತನ ಅಧ್ಯಕ್ಷರಾಗಿ ಪದಗ್ರಹಣ ಮಾಡುವರು ಎಂದು ಶಾಸಕರ ಆಪ್ತವಲಯಗಳು ತಿಳಿಸಿವೆ.ಚಿತ್ರದುರ್ಗ ಜಿಲ್ಲಾ ಕಾಂಗ್ರೆಸ್ ಕಮಿಟಿ ಈ ಬಗ್ಗೆ ಪಕ್ಷದ ಕಾರ್ಯಕರ್ತರಿಗೆ ಸಂದೇಶ ಕಳಿಸಿ ಫೆ.12ರ ಸೋಮವಾರ ಹೊಸದುರ್ಗ ಕ್ಷೇತ್ರದ ಶಾಸಕ ಬಿ.ಜಿ.ಗೋವಿಂದಪ್ಪ ರಾಜ್ಯ ಆಹಾರ ಮಂಡಳಿ ಅಧ್ಯಕ್ಷರಾಗಿ, ಚಳ್ಳಕೆರೆ ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ರಾಜ್ಯ ಕೈಗಾರಿಗಳ ಮಂಡಳಿಯ ಅಧ್ಯಕ್ಷರಾಗಿ ಪದಗ್ರಹಣ ಮಾಡುವರು ಎಂದು ಪ್ರಕಟಣೆ ಮೂಲಕ ತಿಳಿಸಿದೆ. ಶಾಸಕ ಟಿ.ರಘುಮೂರ್ತಿ ಕಾಂಗ್ರೆಸ್ ಪಕ್ಷ ಹಾಗೂ ಮುಖಂಡರಿಗೆ ಯಾವುದೇ ರೀತಿಯ ಮುಜುಗರವಾಗಬಾರದು, ಪಕ್ಷದ ತತ್ವಾಸಿದ್ಧಾಂತ, ಮೌಲ್ಯಗಳಿಗೆ ಬೆಲೆ ನೀಡಿ ಗೌರವಯುತವಾಗಿ ರಾಜ್ಯದ ಮುಖ್ಯಮಂತ್ರಿ ಎಸ್.ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಹಾಗೂ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್‌ಗೆ ಜ.11ರಂದು ಪ್ರತ್ಯೇಕ ಪತ್ರ ಬರೆದು ನನಗೆ ಯಾವುದೇ ನಿಗಮ ಮಂಡಳಿ ಅಧ್ಯಕ್ಷ ಸ್ಥಾನ ನೀಡಬಾರದು ಎಂದು ವಿನಯಪೂರ್ವಕ ಮನವಿ ಮಾಡಿದ್ದರು. ಆದರೆ, ಜ.26ರಂದೇ ಶಾಸಕ ಟಿ.ರಘುಮೂರ್ತಿಯವರನ್ನು ಕರ್ನಾಟಕ ರಾಜ್ಯ ಕೈಗಾರಿಗಳ ಮಂಡಳಿಯ ಅಧ್ಯಕ್ಷರಾಗಿ ಸರ್ಕಾರ ನೇಮಿಸಿದ್ದು ಈ ಬಗ್ಗೆ ಮುಖ್ಯಮಂತ್ರಿ, ಉಪಮುಖ್ಯಮಂತ್ರಿಗಳೊಂದಿಗೆ ಚರ್ಚಿಸಿ ಅಧಿಕಾರ ಸ್ವೀಕರಿಸುವ ಬಗ್ಗೆ ಮಾಹಿತಿ ನೀಡುವುದಾಗಿ ಶಾಸಕರು ತಿಳಿಸಿದ್ದರು. ಈ ಎಲ್ಲಾ ಬೆಳವಣಿಗೆಗಳ ಮಧ್ಯೆ ಫೆ.10ರ ಶನಿವಾರ ಜಿಲ್ಲಾ ಕೆಪಿಸಿಸಿಯಿಂದ ಇಬ್ಬರೂ ಶಾಸಕರು ಅಧಿಕಾರ ಸ್ವೀಕರಿಸುವ ಬಗ್ಗೆ ಮಾಹಿತಿ ನೀಡಿದ್ದು, ಶಾಸಕರ ನಿಗಮ ಅಧ್ಯಕ್ಷ ಅಧಿಕಾರ ಸ್ವೀಕಾರ ಸಮಾರಂಭಕ್ಕೆ ಪಕ್ಷದ ಮುಖಂಡರು, ಕಾರ್ಯಕರ್ತರು ಬೆಂಗಳೂರಿಗೆ ತೆರಳಲು ಈಗಾಗಲೇ ಸಿದ್ದತೆ ನಡೆಸಿದ್ದಾರೆ. ಈ ಕ್ಷೇತ್ರದಲ್ಲಿ ಮೂರನೇ ಬಾರಿಗೆ ಶಾಸಕರಾದ ರಘುಮೂರ್ತಿ ಎರಡನೇ ಬಾರಿಗೆ ನಿಗಮ ಮಂಡಳಿಯ ಅಧ್ಯಕ್ಷ ಸ್ಥಾನ ವಹಿಸುಕೊಳ್ಳುತ್ತಿದ್ದಾರೆ. ಈ ಹಿಂದೆ 2019ರಲ್ಲಿ ಎರಡನೇ ಬಾರಿಗೆ ಆಯ್ಕೆಯಾದಾಗ ಹಟ್ಟಿಚಿನ್ನದ ಗಣಿ ನಿಗಮದ ಅಧ್ಯಕ್ಷರಾಗಿ ಅಧಿಕಾರಿ ಸ್ವೀಕರಿಸಿದ್ದನ್ನು ಸ್ಮರಿಸಬಹುದು.

### ವೈಭವದ ವಿಠಲ ರುಕ್ಮಿಣಿ ದಿಂಡಿ ಉತ್ಸವ

» **ಹಿರಿಯೂರು**

ನಗರದ ದುರ್ಗಿಗುಡಿ ಬೀದಿಯಲ್ಲಿರುವ ಶ್ರೀ ವಿಠ್ಠಲ ರುಕ್ಮಿಣಿ ದೇವಾಲಯದಲ್ಲಿ ಭಾವಸಾರ ಕ್ಷತ್ರಿಯ ಸಮಾಜದ ವತಿಯಿಂದ 17ನೇ ವರ್ಷದ ದಿಂಡಿ ಉತ್ಸವ ಪೂಜಾ ಕಾರ್ಯಕ್ರಮವು ವೈಭವದಿಂದ ಜರಗಿತು. ಇದರ ಅಂಗವಾಗಿ ಪ್ರವಚನ, ಕೀರ್ತನೆ, ಭಜನೆ, ಕಲ್ಯಾಣೋತ್ಸವ, ಜ್ಞಾನೇಶ್ವರಿ ಪಾರಾಯಣ, ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ, ನಡೆಯಿತು . ನಗರದ ಪ್ರಮುಖ ಬೀದಿಗಳಲ್ಲಿ ಶ್ರೀ ವಿಠಲ ರುಕ್ಮಿಣಿ ದೇವರಿಗೆ ಬೆಳ್ಳಿರಥದಲ್ಲಿ ರಾಜಬೀದಿ ಉತ್ಸವ ನಡೆಯಿತು. ದಾರಿಯುದ್ದಕ್ಕೂ ಭಕ್ತಾದಿಗಳು ಭಜನೆ ನಡೆಸುತ್ತಾ ಸಾಗಿ ಬಂದರು. ಮೆರವಣಿಗೆ ಸಾಗಿ ಬಂದ ದಾರಿಯಲ್ಲಿ ಭಕ್ತರ ಮನೆಗಳಲ್ಲಿ ವಿಠ್ಠಲ ರುಕ್ಮಿಣಿ ದೇವರಿಗೆ ಪೂಜೆ ಸಮರ್ಪಿಸಿದರು.

---

**ಶೇಂಗಾ ಬೆಳೆಯಲ್ಲಿ ಅನುಸರಿಸಬೇಕಾದ ಸುಧಾರಿತ ತಂತ್ರಜ್ಞಾನಗಳ ಕುರಿತು ರೈತರಿಗೆ ತರಬೇತಿ**

# ಏರುಮಡಿ ಪದ್ಧತಿಯಲ್ಲಿ ಶೇಂಗಾ ಬೆಳೆ: ಟ್ರ್ಯಾಕ್ಟರ್ ಚಾಲಿತ ಉಪಕರಣದಿಂದ ಪ್ರಾತ್ಯಕ್ಷಿಕೆ

» **ಚಿತ್ರದುರ್ಗ**

ಹಿರಿಯೂರಿನ ಬಬ್ಬೂರು ಫಾರಂ ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ಈಚೆಗೆ ಜಿಲ್ಲೆಯ ರೈತರಿಗೆ "ಶೇಂಗಾ ಬೆಳೆಯಲ್ಲಿ ಅನುಸರಿಸಬೇಕಾದ ಸುಧಾರಿತ ತಂತ್ರಜ್ಞಾನಗಳು ಕುರಿತು ಒಂದು ದಿನದ ತರಬೇತಿ ತರಬೇತಿ ಕಾರ್ಯಕ್ರ ನಡೆಯಿತು.

ಅಖಿಲ ಭಾರತ ಸಮನ್ವಯ ಶೇಂಗಾ ಸಂಶೋಧನಾ ಪ್ರಾಯೋಜನೆ, ಬಬ್ಬೂರು ಫಾರಂ ವಲಯ ಕೃಷಿ ಮತ್ತು ತೋಟಗಾರಿಕೆ ಸಂಶೋಧಾ ಕೇಂದ್ರ ಸಹಭಾಗಿತ್ವದಲ್ಲಿ ತರಬೇತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಈ ತರಬೇತಿ ಕಾರ್ಯಕ್ರಮದಲ್ಲಿ ಬಬ್ಬೂರುಫಾರಂನ ವಲಯ ಕೃಷಿ ಮತ್ತು ತೋಟಗಾರಿಕೆ ಸಂಶೋಧನಾ ಕೇಂದ್ರದಲ್ಲಿ ಏರುಮಡಿ ಪದ್ಧತಿಯಲ್ಲಿ ಶೇಂಗಾ ಬೆಳೆಯಲು ಏರು ಮಡಿ ನಿರ್ಮಿಸುವ ಟ್ರ್ಯಾಕ್ಟರ್ ಚಾಲಿತ ಉಪಕರಣದಿಂದ ಪ್ರಾತ್ಯಕ್ಷಿಕೆ ನೀಡಲಾಯಿತು.



ಜಿಲ್ಲೆಯ ವಿವಿಧ ತಾಲೂಕುಗಳಿಂದ ಆಗಮಿಸಿದ 70ಕ್ಕೂ ಹೆಚ್ಚು ಆಸಕ್ತ ರೈತ ಮತ್ತು ರೈತ ಮಹಿಳೆಯರು ಕಾರ್ಯಕ್ರಮದಲ್ಲಿ ಸಕ್ರಿಯವಾಗಿ ಭಾಗವಹಿಸಿ ಸೂಕ್ತವಾದ ಮಾಹಿತಿ ಪಡೆದುಕೊಂಡರು.

ಬಬ್ಬೂರು ಫಾರಂ ವಲಯ ಕೃಷಿ ಮತ್ತು ತೋಟಗಾರಿಕೆ ಸಂಶೋಧನಾ ಕೇಂದ್ರದ ಸಹ ಸಂಶೋಧನಾ ನಿರ್ದೇಶಕ ಡಾ.ಸುರೇಶ ಡಿ.ಏಕಬೋಟೆ ತರಬೇತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ಕೃಷಿಯಲ್ಲಿ ಕೂಲಿಯಾಳುಗಳ ಸಮಸ್ಯೆ ನಿವಾರಿಸಲು ಕೃಷಿಯಾಂತ್ರೀಕರಣ ಅನಿವಾರ್ಯವಾಗಿದೆ, ಶೇಂಗಾ ಬೆಳೆಯಲ್ಲಿ ರಸಗೊಬ್ಬರಗಳ ಬಳಕೆ ಕಡಿಮೆ ಮಾಡಲು ಜೈವಿಕ ಗೊಬ್ಬರವಾದ ರೈಜೋಬಿಯಂ ಮತ್ತು ಬೇರು ಮತ್ತು ಕಾಂಡ ಕೊಳೆ ರೋಗದ ಸಮಸ್ಯೆಕಡಿಮೆ ಮಾಡಲು ಜೈವಿಕ ಪೀಡೆ ನಾಶಕವಾದ ಟ್ರೈಕೋಡರ್ಮಾದಿಂದ ಬೀಜೋಪಚಾರ ಪ್ರಮುಖ ಪಾತ್ರವಹಿಸಿದೆ.ಈ ನಿಟ್ಟಿನಲ್ಲಿ ಕೆಳದಿ ಶಿವಪ್ಪನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಶಿವಮೊಗ್ಗದಿಂದ ಹೊರತಂದಿರುವ ಸಂಶೋಧನಾ ತಾಂತ್ರಿಕತೆಗಳನ್ನು ರೈತರು ಅನುಸರಿಸುವ ನಿಟ್ಟಿನಲ್ಲಿ ನಮ್ಮ ವಲಯ ಕೃಷಿ ಮತ್ತು ತೋಟಗಾರಿಕೆ ಸಂಶೋಧನಾ ಕೇಂದ್ರ, ಕೃಷಿ ವಿಜ್ಞಾನಕೇಂದ್ರ, ಬಬ್ಬೂರು ಫಾರಂ ಹಾಗೂ ತೋಟಗಾರಿಕೆ ಮಹಾವಿದ್ಯಾಲಯ, ಹಿರಿಯೂರು ಸದಾ ಸಿದ್ಧವೆಂದು ಭರವಸೆ ನೀಡಿದರು.

ಶೇಂಗಾತಳಿ ವಿಜ್ಞಾನಿ ಡಾ.ಬಿ. ಎನ್. ಹರೀಶ್ ಬಾಬು ಮಾತನಾಡಿ, ಕರ್ನಾಟಕ ರಾಜ್ಯದ ಮಧ್ಯ ಒಣವಲಯ ಪ್ರದೇಶಕ್ಕೆ ಸೂಕ್ತವಾದಂತಹ ಶೇಂಗಾ ತಳಿಗಳು ಮತ್ತು ರೈತರು ಅನುಸರಿಸಬೇಕಾದ ಸುಧಾರಿತ ಬೇಸಾಯಕ್ರಮಗಳ ಬಗ್ಗೆ ಸಮಗ್ರ ಮಾಹಿತಿ ನೀಡಿ, ಇತ್ತೀಚಿಗೆ ಬಿಡುಗಡೆ ಮಾಡಲಾದ ಸುಧಾರಿತ ತಳಿಯಾದ ಡಿ.ಹೆಚ್256 ರೈತರು ಹೆಚ್ಚಾಗಿ ಬೆಳೆಯಬೇಕೆಂದು ಮನವಿ ಮಾಡಿದರು. ಈ ನಿಟ್ಟಿನಲ್ಲಿ ವಲಯ ಕೃಷಿ ಮತ್ತು ತೋಟಗಾರಿಕೆ ಸಂಶೋಧಾ ಕೇಂದ್ರದಲ್ಲಿ ಪ್ರಸ್ತುತ ಡಿ.ಹೆಚ್256 ಶೇಂಗಾ ತಳಿಯ ಬೀಜಗಳು ಲಭ್ಯವಿದ್ದು, ಆಸಕ್ತ ರೈತರು ಸಂಶೋಧನಾ ಕೇಂದ್ರದಿಂದ ಖರೀದಿಸಬಹುದೆಂದು ತಿಳಿಸಿದರು.

ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಸಹಾಯಕ ಕೃಷಿ ನಿರ್ದೇಶಕ ಆರ್.ರಜನೀಕಾಂತ ಮಾತನಾಡಿ, ಶೇಂಗಾ ಜಿಲ್ಲೆಯ ಪ್ರಮುಖ ಎಣ್ಣೇಕಾಳು ಬೆಳೆಯಾಗಿದ್ದು, ಬೀಜೋಪಚಾರ, ಪೋಷಕಾಂಶಗಳ ನಿರ್ವಹಣೆ, ಸೂಕ್ತ ಸಮಯದಲ್ಲಿ ಕೀಟ ರೋಗಗಳ ನಿರ್ವಹಣೆ ಮತ್ತು ನೀರಾವರಿ ಸೌಲಭ್ಯವುಳ್ಳವರು ಏರುಮಡಿ ಪದ್ಧತಿಯನ್ನು ಅನುಸರಿಸಿ ಶೇಂಗಾ ಬೆಳೆಯಲ್ಲಿ ಉತ್ತಮ ಇಳುವರಿ ಪಡೆಯಲು ಈ ತರಬೇತಿಯ ಸದುಪಯೋಗ ಪಡೆದುಕೊಳ್ಳಲು ಕೋರಿದರು.ತಾಂತ್ರಿಕಅಧಿಕಾರಿ(ಕೀಟಶಾಸ್ತ್ರ) ವಿಜಯ ಎಸ್.ಧಾನರಡ್ಡಿ ಅವರು ಶೇಂಗಾ ಬೆಳೆಗೆ ಬಾಧಿಸುವ ಪ್ರಮುಖಕೀಟ ಮತ್ತು ರೋಗಗಳ ನಿರ್ವಹಣೆ ಬಗ್ಗೆ ಮಾಹಿತಿ ನೀಡಿದರು. ಕೃಷಿ ಇಂಜಿನಿಯರ್ ಡಾ.ರಾಜಶೇಖರ್ ಡಿ. ಬಾರ್ಕರ್ ಅವರು ಶೇಂಗಾ ಬೆಳೆ ಬಿತ್ತನೆಯಿಂದ ಕೊಯ್ಲು ಮತ್ತು ಕೊಯ್ಲೋತ್ತರ ಚಟುವಟಿಗಳಿಗೆ ಸೂಕ್ತವಾದಂತಹ ಯಂತ್ರೋಪಕರಣಗಳ ಬಗ್ಗೆ ರೈತರಿಗೆ ಮಾಹಿತಿ ನೀಡಿದರು.

ತಳಕು ಹೋಬಳಿಯ ಪ್ರಗತಿಪರ ರೈತ ಗುಡಿಹಳ್ಳಿ ಬಡಗಿರಂಗಪ್ಪ ಅವರು ಸುಧಾರಿತ ತಾಂತ್ರಿಕತೆ ಅಳವಡಿಸಿಕೊಂಡು ಡಿ.ಹೆಚ್256 ಮತ್ತು ಕದರಿ ಲೇಪಾಕ್ಷಿ ಶೇಂಗಾತಳಿಯಿಂದ ಉತ್ತಮ ಇಳುವರಿ ಪಡೆದ ಹಾಗೂ ಬಿಳಿರಾಗಿ ಬೆಳೆದ ಅನುಭವ ಹಂಚಿಕೊಂಡರು. ಅದೇರೀತಿ ತಳಕು ಹೋಬಳಿಯ ಮತ್ತೋರ್ವ ಪ್ರಗತಿ ಪರರೈತ ಶರಣಪ್ಪ ಅವರು ಹಾಲಿ ನೀರಾವರಿಯಲ್ಲಿ ಏರು ಮಡಿ ಪದ್ಧತಿಯಲ್ಲಿ ಡಿ.ಹೆಚ್256 ಉತ್ತಮವಾಗಿ ಬೆಳೆದಿದ್ದು, ಎಕರೆಗೆ 10-12 ಕ್ವಿಂಟಲ್ ಇಳುವರಿ ನಿರೀಕ್ಷಿಸಬಹುದು ಎಂದು ತಮ್ಮ ಅನುಭವ ಹಂಚಿಕೊಂಡರು.

---


**ಕಾಯಕ ಶರಣರ ಜಯಂತಿಯಲ್ಲಿ ಉಪವಿಭಾಗಾಧಿಕಾರಿ ಎಂ.ಕಾರ್ತೀಕ್**

## ಶರಣರ ಆದರ್ಶ ಪಾಲಿಸಿ, ಉತ್ತಮ ಸಮಾಜ ನಿರ್ಮಿಸೋಣ

» **ಚಿತ್ರದುರ್ಗ**

ಕಾಯಕ ಶರಣರ ಆದರ್ಶ ಪಾಲನೆ ಹಾಗೂ ಅವರ ಮಾರ್ಗದರ್ಶನದಲ್ಲಿ ನಾವುಗಳು ನಡೆದು, ಉತ್ತಮ ಸಮಾಜ ನಿರ್ಮಿಸೋಣ ಎಂದು ಉಪವಿಭಾಗಾಧಿಕಾರಿ ಎಂ.ಕಾರ್ತೀಕ್ ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶನಿವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ವತಿಯಿಂದ ಮಾದರ ಚೆನ್ನಯ್ಯ, ಮಾದರ ಧೂಳಯ್ಯ, ಡೋಹರ ಕಕ್ಕಯ್ಯ, ಉರಿಲಿಂಗ ಪೆದ್ದಿ ಹಾಗೂ ಸಮಗಾರ ಹರಳಯ್ಯ ಮೊದಲಾದ ಕಾಯಕ ಶರಣರ ಜಯಂತಿ ಆಚರಣೆ ಸಮಾರಂಭದಲ್ಲಿ ಕಾಯಕ ಶರಣರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಅವರು ಮಾತನಾಡಿದರು.



ಕಾಯಕ ಶರಣರಾದ ಮಾದರ ಚೆನ್ನಯ್ಯ, ಮಾದರ ಧೂಳಯ್ಯ, ಡೋಹರ ಕಕ್ಕಯ್ಯ, ಉರಿಲಿಂಗ ಪೆದ್ದಿ ಹಾಗೂ ಸಮಗಾರ ಹರಳಯ್ಯ ಅವರು ತಮ್ಮ ಕಾಯಕದಿಂದ ಗುರುತಿಸಿಕೊಂಡವರು. ಕಾಯಕ ಶರಣರ ಆದರ್ಶಗಳ ಪಾಲನೆ ಮಾಡುವ ಮೂಲಕ ಉತ್ತಮ ಸಮಾಜ ನಿರ್ಮಿಸೋಣ ಎಂದು ತಿಳಿಸಿದ ಅವರು, ಶುದ್ಧ ಮನಸ್ಸಿನಿಂದ ಕಾಯಕ ಮಾಡಿದರೆ ಅದರ ಪ್ರತಿಫಲ ಪ್ರತಿಯೊಬ್ಬರಿಗೂ ದೊರೆಯಲಿದೆ. ಕಾಯಕ ಶರಣರು ವಚನಗಳ ಮೂಲಕ ಸಾರಿರುವ ಸಂದೇಶಗಳನ್ನು ನಾವು ಪಾಲಿಸಬೇಕಿದೆ ಎಂದು ಹೇಳಿದರು.

ನಗರಸಭೆ ಮಾಜಿ ಅಧ್ಯಕ್ಷ ಡಿ.ಎನ್.ಮೈಲಾರಪ್ಪ ಮಾತನಾಡಿ, ಕಾಯಕ ಶರಣರ ಜಯಂತಿಯನ್ನು ಸಂಭ್ರಮ-ಸಡಗರದಿಂದ ಅರ್ಥಪೂರ್ಣವಾಗಿ ಆಚರಣೆ ಮಾಡಲಾಗಿದೆ. ಕಾಯಕ ಶರಣರ ಆದರ್ಶ, ವಿಚಾರಧಾರೆಗಳನ್ನು ತಿಳಿದುಕೊಳ್ಳುವ ಅವಶ್ಯಕತೆ ಇದೆ ಎಂದು ಹೇಳಿದರು.

ನಗರಸಭೆ ಮಾಜಿ ಅಧ್ಯಕ್ಷ ಹೆಚ್.ಸಿ.ನಿರಂಜನಮೂರ್ತಿ ಮಾತನಾಡಿ, ಕಾಯಕ ಶರಣರ ಇತಿಹಾಸ, ಅವರು ವಚನಗಳ ಮೂಲಕ ಸಮಾಜಕ್ಕೆ ಕೊಟ್ಟ ಕೊಡುಗೆಯನ್ನು ಮುಂದಿನ ಪೀಳಿಗೆಗೆ ತಿಳಿಯಬೇಕು. ಅವರ ಆದರ್ಶಗಳನ್ನು ಪಾಲನೆ ಮಾಡಬೇಕು ಎಂದು ತಿಳಿಸಿದ ಅವರು, ಮುಂದಿನ ಬಾರಿಯ ಕಾಯಕ ಶರಣರ ಜಯಂತಿ ಕಾರ್ಯಕ್ರಮದಲ್ಲಿ ಕಾಯಕ ಶರಣರ ಮಾಹಿತಿ ಒಳಗೊಂಡ ಮಾಹಿತಿ ಪುಸ್ತಕಗಳನ್ನು ನೀಡುವ ವ್ಯವಸ್ಥೆ ಆಗಬೇಕು ಎಂದು ಮನವಿ ಮಾಡಿದರು.

ಸಾಹಿತಿ ಹೆಚ್. ಆನಂದ ಕುಮಾರ್ ಅವರು ಕಾಯಕ ಶರಣರಾದ ಉರಿಲಿಂಗ ಪೆದ್ದಿ ಹಾಗೂ ಸಮಾಗಾರ ಹರಳಯ್ಯ ಅವರು ಕುರಿತು ಉಪನ್ಯಾಸ ನೀಡಿ,ಕೆಳಸ್ತರಜಾತಿಗಳಲ್ಲಿಹುಟ್ಟಿ,ಅಸ್ಪ್ರಶ್ಯತೆಯಂತಹ ಅಮಾನವೀಯ ಸಮಾಜ ಎದುರಿಸಿ ಪರಮಶ್ರೇಷ್ಠ ಕಾಯಕ ಶರಣರ ಜಯಂತಿಯನ್ನು ಸರ್ಕಾರ ಆಚರಣೆ ಮಾಡುತ್ತಿರುವುದು ಅತ್ಯಂತ ಅಭಿನಂದನೀಯವಾದ ಸಂಗತಿ. ಉರಿಲಿಂಗ ಪೆದ್ದಿಯವರ ಮೂಲ ಹೆಸರು ಪೆದ್ದಣ್ಣ. ಇವರ ಕಾಲಮಾನ 12ನೇ ಶತಮಾನ. ಆಂಧ್ರಪ್ರದೇಶದ ಗೋದಾವರಿ ತೀರದ ಲಾತೋರ್ ಜಿಲ್ಲೆಯ ಪುಟ್ಟ ಹಳ್ಳಿಯಲ್ಲಿ ಜನಿಸುತ್ತಾರೆ. ಇವರ ಮೂಲ ವೃತ್ತಿ ಕಳ್ಳತನವಾಗಿತ್ತು. ಪರಿವರ್ತನೆಗೊಂಡ ನಂತರ ಕಾಯಕದಿಂದ ವೃತ್ತಿಯನ್ನು ಆರಂಭಿಸಿ ದೊಡ್ಡ ವಚನಕಾರಾಗಿ ಬೆಳೆಯುತ್ತಾರೆ. ಇವರ 366 ವಚನಗಳು ಲಭ್ಯವಿದೆ. ಇವರು ಹಲವು ಕೆರೆಗಳನ್ನು ನಿರ್ಮಾಣ ಮಾಡುತ್ತಾರೆ ಎಂದು ಹೇಳಿದರು.

ಸಮಗಾರ ಹರಳಯ್ಯ ಅವರು 12ನೇ ಶತಮಾನದಲ್ಲಿ ಶರಣ ಪರಂಪರೆಯಲ್ಲಿ ಉತ್ಕಟ ಭಕ್ತಿರಸ ಹೊರಹೊಮ್ಮಿಸಿದವರು ಸಮಗಾರ ಹರಳಯ್ಯ. ಬಸವ ಪರಂಪರೆಯ ಸರತಿಸಾಲಿನಲ್ಲಿ ಉನ್ಮಾದ ಶಿವಭಕ್ತಿ ಹಾಗೂ ಗುರುಭಕ್ತಿ ಹರಳಯ್ಯ ದಂಪತಿಗಳದು ಎಂದರು.

---

## ಜೀತ ಪದ್ಧತಿಯನ್ನು ಬುಡ ಸಮೇತ ಕಿತ್ತೊಗೆಯಬೇಕು; ರಾಜೇಶ್ವರಿ ಹೆಗಡೆ



» **ದಾವಣಗೆರೆ**

ಜೀತ ಪದ್ಧತಿ ನಿರ್ಮೂಲನೆ ಮಾಡಲು ಕಾಯ್ದೆ ರೂಪಿಸಲಾಗಿದ್ದರೂ ಅಲ್ಲಲ್ಲಿ ವರದಿಯಾಗುತ್ತಿದ್ದು ಇದನ್ನು ಬುಡ ಸಮೇತ ಕಿತ್ತುಗೆಯಲು ಎಲ್ಲರೂ ಸಹಕಾರ ನೀಡಬೇಕು ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಅಧ್ಯಕ್ಷರಾದ ರಾಜೇಶ್ವರಿ ಎನ್. ಹೆಗಡೆ ಹೇಳಿದರು.ಶುಕ್ರವಾರ (ಫೆ.9) ರಂದು ಜಿಲ್ಲಾಡಳಿತ, ಮತ್ತು ಜಿಲ್ಲಾ ಪಂಚಾಯತ್ ವತಿಯಿಂದ ನಗರದ ಅಂಬೇಡ್ಕರ್ ವೃತ್ತದಲ್ಲಿ ಆಯೋಜಿಸಲಾಗಿದ್ದ ಜೀತಪದ್ಧತಿ ನಿರ್ಮೂಲನಾ ದಿನಾಚರಣೆಯ ಪ್ರಯುಕ್ತ ಹಮ್ಮಿಕೊಳ್ಳಲಾಗಿದ್ದ ಜಾಥಾ ಕಾರ್ಯಕ್ರಮಕ್ಕೆ ಹಸಿರು ನಿಶಾನೆ ತೋರುವುದರ ಮೂಲಕ ಚಾಲನೆ ನೀಡಿ ಮಾತನಾಡಿದರು. ಈ ಹಿಂದಿನ ಕಾಲದಿಂದಲೂ ಜೀತ ಪದ್ಧತಿ ರೂಡಿಯಲ್ಲಿದೆ, ಮನೆಯಲ್ಲಿ ಹಣಕಾಸಿನ ತೊಂದರೆಯಾದರೆ ಶ್ರೀಮಂತರ ಬಳಿ ಹಣವನ್ನು ಪಡೆಯುತ್ತಿದ್ದರು. ಪಡೆದ ಹಣಕ್ಕೆ ಬಡ್ಡಿಯ ರೂಪದಲ್ಲಿ ಎಲ್ಲರೂ ಸಹ ಅವರ ಮನೆಯಲ್ಲಿ ಜೀತವನ್ನು ಮಾಡಬೇಕಿತ್ತು. ಜೀತ ಪದ್ಧತಿ ರದ್ದತಿ ಕಾಯ್ದೆಯನ್ನು 1976 ರಲ್ಲಿ ದೇಶದಾದ್ಯಂತ ಜಾರಿ ಮಾಡಲಾಯಿತು. ಜೀತ ಪದ್ಧತಿ ಎಲ್ಲಿ ಇದೆ, ಅದನ್ನು ಗುರುತಿಸಿ ಸಂಬಂಧಪಟ್ಟ ಅಧಿಕಾರಿಗಳಿಗೆ ಮಾಹಿತಿ ನೀಡಿ ಅದನ್ನು ನಿರ್ಮೂಲನೆ ಮಾಡಬೇಕು. ಇಂತಹ ಪ್ರಕರಣಗಳು ಕಂಡುಬಂದರೆ ಅಂಥವರಿಗೆ ಪುನರ್ವಸತಿ ಕಲ್ಪಿಸಬೇಕು ಎಂದ ಅವರು ಜೀತ ಪದ್ಧತಿ ನಿರ್ಮೂಲನಾ ದಿನಾಚರಣೆ ಅಂಗವಾಗಿ ಪ್ರತಿಜ್ಞಾ ವಿಧಿ ಭೋದಿಸಿದರು.

---

**ಪ್ರಮುಖ ಸುದ್ದಿ**

# ಮೋದಿ ಮತ್ತೊಮ್ಮೆ ಪ್ರಧಾನಿ ಪೋಸ್ಟರ್ ಅಭಿಯಾನಕ್ಕೆ ಚಾಲನೆ

» **ಚಿತ್ರದುರ್ಗ**

ಭಾರತ ಬಲಿಷ್ಟವಾಗಬೇಕಾದರೆ ವಿಶ್ವ ಮೆಚ್ಚಿದ ನಾಯಕ ನರೇಂದ್ರಮೋದಿ ಮತ್ತೊಮ್ಮೆ ದೇಶದ ಪ್ರಧಾನಿಯಾಗಬೇಕೆಂದು ಬಿಜೆಪಿ. ಯುವ ಮುಖಂಡ ಎಂ.ಸಿ.ರಘುಚಂದನ್ ತಿಳಿಸಿದರು.

2024 ಕ್ಕೆ ನರೇಂದ್ರಮೋದಿ ಮತ್ತೊಮ್ಮೆ ದೇಶದ ಪ್ರಧಾನಿ ಏಕೆ ಎನ್ನುವ ಸ್ಟಿಕರ್‌ಗಳನ್ನು ಪ್ರವಾಸಿ ಮಂದಿರದಲ್ಲಿ ಶನಿವಾರ ಆಟೋಗಳಿಗೆ ಅಂಟಿಸುವ ಮೂಲಕ ಚಾಲನೆ ನೀಡಿ ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಕಳೆದ ಹತ್ತು ವರ್ಷಗಳಲ್ಲಿ ಪ್ರಧಾನಿ ಮೋದಿರವರು ಕೈಗೊಂಡಿರುವ ಪ್ರಮುಖ ಯೋಜನೆಗಳ ಮಾಹಿತಿಯನ್ನು ಚಿತ್ರದುರ್ಗ ಲೋಕಸಭಾ ಕ್ಷೇತ್ರದ ವ್ಯಾಪ್ತಿಯ ಪ್ರತಿ ಮನೆ ಮನೆಗೆ ತಲುಪಿಸುವ ಉದ್ದೇಶದಿಂದ ಒಂದು ಸಾವಿರಕ್ಕೂ ಹೆಚ್ಚು ಆಟೋಗಳಿಗೆ ಸ್ಟಿಕರ್‌ಗಳನ್ನು ಅಳವಡಿಸಿದ್ದು, 546 ಲೋಕಸಭಾ ಕ್ಷೇತ್ರಗಳಲ್ಲಿ ಎಲ್ಲಿಯೂ ಇಂತಹ ಕಾರ್ಯಕ್ರಮವಾಗಿಲ್ಲ ಎಂದು ಹೇಳಿದರು.



ಚಿತ್ರದುರ್ಗ ನಗರದಲ್ಲಿ 150 ಆಟೋಗಳಿಗೆ ಚಾಲನೆ ನೀಡಿದ್ದು, ಪ್ರತಿ ತಾಲ್ಲೂಕಿನಲ್ಲಿಯೂ ಇಂತಹ ಕಾರ್ಯಕ್ರಮಗಳಿಗೆ ಚಾಲನೆ ನೀಡಲಾಗುವುದು. ಇದುವರೆವಿಗೂ 1600 ಆಟೋಗಳು ನೊಂದಾಯಿಸಿಕೊಂಡಿವೆ. ಒಂದೊಂದು ಆಟೋಗೆ 1500 ರೂ. ವೆಚ್ಚವಾಗಲಿದೆ. ಅಟಲ್‌ಬಿಹಾರಿ ವಾಜಪೇಯಿರವರು ಪ್ರಧಾನಿಯಾಗಿದ್ದಾಗ ಒಳ್ಳೊಳ್ಳೆ ಯೋಜನೆಗಳನ್ನು ದೇಶಕ್ಕೆ ನೀಡಿದರು. ಆದರೆ ಕಾರ್ಯಕರ್ತರು ಸರಿಯಾಗಿ ಪ್ರಚಾರ ಮಾಡದ ಕಾರಣ ಅವರು ಸೋಲಬೇಕಾಯಿತು. ಅಂತಹ ತಪ್ಪು ಮತ್ತೆ ಮರುಕಳಿಸಬಾರದೆನ್ನುವ ಉದ್ದೇಶದಿಂದ ಇಂತಹ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ನಾನು ಕೂಡ ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಪ್ರಬಲ ಆಕಾಂಕ್ಷಿ. ಆದರೆ ಹೈಕಮಾಂಡ್ ಯಾರಿಗೆ ಟಿಕೇಟ್ ನೀಡಲಿ ಅವರ ಪರ ಪ್ರಾಮಾಣಿಕವಾಗಿ ಕೆಲಸ ಮಾಡುತ್ತೇನೆ. ಕಳೆದ ಚುನಾವಣೆಯಲ್ಲಿ ನಮ್ಮ ಪಕ್ಷದ ಅಭ್ಯರ್ಥಿ ಎಪ್ಪತ್ತು ಸಾವಿರ ಮತಗಳ ಅಂತರದಿಂದ ಗೆದ್ದರು. ಈ ಬಾರಿ ಒಂದು ಲಕ್ಷ ಐವತ್ತು ಸಾವಿರ ಮತಗಳ ಅಂತರದಿಂದ ಗೆಲ್ಲುತ್ತೇವೆ. ಪಕ್ಷದಲ್ಲಿ ಭಿನ್ನಮತ ಭುಗಿಲೆದ್ದಿರುವುದು ವರಿಷ್ಠರ ಗಮನಕ್ಕೆ ಬಂದಿದೆ. ಸಣ್ಣಪುಟ್ಟ ವ್ಯತ್ಯಾಸಗಳಿರುತ್ತವೆ. ಎಲ್ಲವನ್ನು ಸರಿಪಡಿಸಿಕೊಳ್ಳುತ್ತೇವೆಂದರು.

ಭೀಮುಸಮುದ್ರದ ಯುವ ಮುಖಂಡ ಜಿ.ಎಸ್.ಅನಿತ್‌ಕುಮಾರ್, ಶ್ರೀಮತಿ ರತ್ನಮ್ಮ, ಮಲ್ಲಿಕಾರ್ಜುನ್, ಚಂದ್ರಿಕಾ ಲೋಕನಾಥ್, ವಕ್ತಾರ ನಾಗರಾಜ್‌ಬೇದ್ರೆ, ತಿಪ್ಪೇಸ್ವಾಮಿ, ವೆಂಕಟೇಶ್‌ಯಾದವ್, ನಗರಸಭೆ ಸದಸ್ಯ ದೀಪು, ಹೊಳಲ್ಕೆರೆ ಮಂಡಲ ಅಧ್ಯಕ್ಷ ಸಿದ್ದೇಶ್, ಭಾರತಿ ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T